# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 284 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 03–06–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 284 | Title- Code: KARKAN 28269 | Chitradurga | Date: 03-06-2024 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಬಯಕೆ ಈಡೇರಿಕೆಗೆ ತಮ್ಮದೇ ಆದ ಜ್ಞಾನ ವಿವೇಕ ಇಟ್ಟುಕೊಂಡು ಬೆಳೆಯಬೇಕಾಗುತ್ತದೆ 2

ಲೋಕಸಭಾ ಚುನಾವಣೆ, ಜೂನ್ 4 ರಂದು ಶಿವಗಂಗೋತ್ರಿಯಲ್ಲಿ ಮತ ಎಣಿಕೆ 3

ಧೂಮಪಾನ ಮತ್ತು ಮದ್ಯಪಾನ ಜೀವನಕ್ಕೆ ಕಂಟಕಪ್ರಾಯ: ಬಿ.ರೂಪ 4



ಸುದ್ದಿ, ಜಾಹಿರಾತಿಗೆ
9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ನಾಗೇಂದ್ರ ರಾಜೀನಾಮೆಗೆ ಬಿಜೆಪಿ ಒತ್ತಾಯ

» ಚಿತ್ರದುರ್ಗ

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ಹಗರಣಕ್ಕೆ ಸಂಬಂಧಿಸಿದಂತೆ ಸಚಿವ ನಾಗೇಂದ್ರ ರವರು ತಮ್ಮ ಸ್ಥಾನಕ್ಕೆ ರಾಜೀನಾಮೆಯನ್ನು ನೀಡಬೇಕು ಹಾಗಯೇ ಅದಕ್ಕೆ ತಕ್ಕ ಶಿಕ್ಷಯಾಗಬೇಕು ಎಂದು ಮಾಜಿ ಶಾಸಕ ನೇರ್ಲಗುಂಟೆ ತಿಪ್ಪೇಸ್ವಾಮಿ ಆಗ್ರಹಿಸಿದ್ದಾರೆ.

ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ಪಟ್ಟಣದಲ್ಲಿ ಇಂದು ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿಮಾತನಾಡಿದಅವರು,ಸರ್ಕಾರ ನಾಯಕ ಜನಾಂಗದವರಿಗಾಗಿಯೇ ಹಣವನ್ನು ಮಿಸಲಿಸಿದೆ. ಇದರಲ್ಲಿ ಈ ಜನಾಂಗದ ಅಭೀವೃದ್ಧಿಯನ್ನು ಮಾಡಬೇಕು, ಗಂಗಕಲ್ಯಾಣ ಯೋಜನೆಯಡಿ ಕೊಳವೆಬಾವಿಗಳನ್ನು ಕೊರೆಯಿಸಿ ಕೊಡಬೇಕು ಮಕ್ಕಳ ವಿದ್ಯಾಭ್ಯಾಸಕ್ಕೆ ಸ್ಕಾಲರಶಿಪ್ ನೀಡಬೇಕು, ಆದರೆ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಇಲ್ಲಿ ಇದ್ದ ಹಣವನ್ನು ಬೇರೆ ಕಡೆಗೆ ವರ್ಗಾಯಿಸಿಕೊಂಡು ಚುನಾವಣೆಯನ್ನು ನಡೆಸಿದೆ. ಇದರಲ್ಲಿ ಸಚಿವರ ಪಾತ್ರ ಬಹಳ ಮುಖ್ಯವಾಗಿದೆ ಅವರ ಅನುಮತಿ ಇಲ್ಲದೆ ಇಷ್ಟೊಂದು ಹಣ ಬೇರೆ ಕಡೆಗೆ ವರ್ಗಾವಣೆಯಾಗಲು ಸಾಧ್ಯವಿಲ್ಲ ಈ ಹಿನ್ನಲೆಯಲ್ಲಿ ನಾಗೇಂದ್ರ ರವರ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆಯನ್ನು ನೀಡಬೇಕೆಂದು ಆಗ್ರಹಿಸಿದರು.ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷ ಆಯಿತು ಈ ಅವಧಿಯಲ್ಲಿ ಯಾವುದೇ ಪ್ರಗತಿಪರ ಚಟುವಟಿಕೆಗಳು ನಡೆದಿಲ್ಲ. ರಾಜ್ಯ ಸರ್ಕಾರ ಸಂಪೂರ್ಣವಾಗಿ ಭ್ರಷ್ಟಾಚಾರದಲ್ಲಿ ತೊಡಗಿದೆ.. ಇವರು ರಾಜ್ಯದ ಜನತೆಗೆ ನಿರಾಶೆ ಉಂಟು ಮಾಡಿದ್ದಾರೆ.. ಸುಳ್ಳು ಹೇಳುವುದೇ ಸಿದ್ದರಾಮಯ್ಯರವರ ಸಾಧನೆ.ಮಾರ್ಚ ತಿಂಗಳಲ್ಲೇ ಎಸ್ ಟಿ ಕಾರ್ಪೊರೇಷನ್ ನಿಂದ 187 ಕೋಟಿ ರೂ ಹಗಲು ದರೋಡೆಯಾಗಿದೆ.. ಖಜಾನೆಯಿಂದ ವರ್ಗಾವಣೆ ಮಾಡಿ ಚುನಾವಣೆಗೆ ಹೋಗಿದೆ. ಪ್ರಕರಣ ಬಯಲಿಗೆ ಬಂದರು ಮುಖ್ಯಮಂತ್ರಿಗಳು, ಮಂತ್ರಿಗಳು ಬಾಯಿ ಬಿಡುತ್ತಿಲ್ಲ ಎಂದು ದೂರಿದರು.ಈಗ ಖಜಾನೆ ಹಗಲು ದರೋಡೆ ಆದರು ಸಿದ್ದರಾಮಯ್ಯರವರು ಬಂಡತನ ಪ್ರದರ್ಶನ ಮಾಡಿದ್ದಾರೆ. ಹಗರಣ ಮುಚ್ಚಿ ಹಾಕಲು ಪ್ರಯತ್ನ ಮಾಡ್ತಿದ್ದಾರೆ. ಇವರು ಎಸ್.ಐ.ಟಿ ಗೆ ಕೊಟ್ಟರೆ ನಿಷ್ಪಕ್ಷಪಾತ ತನಿಖೆ ಆಗಲ್ಲ.. ಕೇಂದ್ರ ಸರ್ಕಾರದ ತನಿಖಾ ಸಂಸ್ಥೆಗಳಿಗೆ ವಹಿಸಬೇಕು. ಸಿಬಿಐ ತನಿಖಾ ತಂಡಕ್ಕೆ ಈ ಪ್ರಕರಣ ಕೊಡಬೇಕು.ಈ ಹಗರಣದಲ್ಲಿ ಸರ್ಕಾರದ ಪಾಲುದಾರಿಕೆ ಇದೆ.. ಮುಖ್ಯಮಂತ್ರಿ ಕೂಡಲೇ ರಾಜೀನಾಮೆ ನೀಡಿ ತನಿಖೆಗೆ ಸಹಕರಿಸಬೇಕು ಎಂದು ತಿಪ್ಪೇಸ್ವಾಮಿ ಒತ್ತಾಯಿಸಿದರು.




ಮೊಳಕಾಲ್ಮೂರು ತಾಲ್ಲೂಕು ಮಂಡಲ ಅಧ್ಯಕ್ಷ ಡಾ.ಪಿ. ಮಂಜುನಾಥ್ ಮಾತನಾಡಿ, ಸಿದ್ದರಾಮಯ್ಯರವರು ಶೋಷಿತ ಸಮುದಾಯಗಳ ಪರವಾದ ಸರ್ಕಾರ ಅಂತ ಹೇಳುತ್ತಾರೆ ಆದರೆ ಅವರ ಕಲ್ಯಾಣಕ್ಕಾಗಿ ಇಟ್ಟಂತಹ ಹಣವನ್ನು ಏಕೆ ದುರುಪಯೋಗ ಪಡಿಸಿಕೊಂಡಿದ್ದೀರಿ. ವಾಲ್ಮೀಕಿ ಸಮುದಾಯಕ್ಕೆ ಇಟ್ಟಂತ ಹಣವನ್ನು ತೆಲಂಗಾಣ ಆಂಧ್ರಪ್ರದೇಶಕ್ಕೆ ಕಳಿಸಿದ್ದೀರಿ. ಕಣ್ಣು ಹೊರೆಸುವ ಸಲುವಾಗಿ ಎಸ್‌ಐಟಿ ತಂಡ ರಚನೆ ಮಾಡಿ ಎಂ.ಡಿ ಅರೆಸ್ಟ್ ಮಾಡುವ ಪ್ರಯತ್ನ ಮಾಡ 'ತ್ತಿದ್ದೀರಿ.ಸಿದ್ದರಾಮಯ್ಯರವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಿ ತನಿಖೆಗೆ ಸಹಕರಿಸಬೇಕು. ಸಮಾಜ ಕಲ್ಯಾಣ ಇಲಾಖೆ ಸಚಿವರು ಆರೋಪ ಬಂದಾಗ ರಾಜೀನಾಮೆ ಕೊಡಬೇಕು.. ಅವರು ಹಗರಣ ಮುಚ್ಚಿಹಾಕಲು ಸಂಪುಟವೇ ಮುಂದಾಗಿದೆ..ಇಂದು ಸಚಿವರು ರಾಜೀನಾಮೆ ಕೊಟ್ಟು ತನಿಖೆಗೆ ಸಹಕರಿಸಬೇಕು ಎಂದರು.

## ಫಾಸ್ಟ್ ನ್ಯೂಸ್

### ಆದರ್ಶ ವಿದ್ಯಾಲಯ: ಪ್ರವೇಶ ಪರೀಕ್ಷೆಗೆ ಅರ್ಜಿ

» ಚಿತ್ರದುರ್ಗ

ಸಮಗ್ರ ಶಿಕ್ಷಣ ಕರ್ನಾಟಕ ಹಾಗೂ ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತಿನ ವತಿಯಿಂದ 2024–25ನೇ ಸಾಲಿಗೆ ಚಳ್ಳಕೆರೆ, ಮೊಳಕಾಲ್ಮುರು ತಾಲ್ಲೂಕುಗಳಲ್ಲಿನ ಅದರ್ಶ ವಿದ್ಯಾಲಯದಲ್ಲಿ ಖಾಲಿ ಉಳಿದಿರುವ 7,8,9ನೇ ತರಗತಿಗೆ ದಾಖಲಾಗಲು ಪ್ರವೇಶ ಪರೀಕ್ಷೆಗೆ ನೇರವಾಗಿ ಮುಖ್ಯ ಶಿಕ್ಷಕರಿಗೆ ಅರ್ಜಿ ಸಲ್ಲಿಸಲು ಜೂನ್ 3 ರಿಂದ 13 ರವರೆಗೆ ಅವಕಾಶ ಕಲ್ಪಿಸಲಾಗಿದೆ. ಪ್ರವೇಶ ಪರೀಕ್ಷೆಗೆ ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿನ ವಿದ್ಯಾರ್ಥಿಗಳು ಆದರ್ಶ ವಿದ್ಯಾಲಯದ ಮುಖ್ಯ ಶಿಕ್ಷಕರಿಗೆ ನೇರವಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಡಿಡಿಪಿಐ (ಆಡಳಿತ). ಅಭಿವೃದ್ಧಿ, ಬಿ.ಇ.ಓ/ಬಿ. ಆರ್.ಸಿ ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕು ಆದರ್ಶ ವಿದ್ಯಾಲಯ ಮುಖ್ಯ ಶಿಕ್ಷಕರು ಇವರನ್ನು ಸಂಪರ್ಕಿಸಬಹುದು.

### ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ: ಅರ್ಜಿ

» ಚಿತ್ರದುರ್ಗ

ಸರ್ಕಾರಿ ಕೈಗಾರಿಕೆ ತರಬೇತಿ ಸಂಸ್ಥೆಗಳಲ್ಲಿ 2024ನೇ ಸಾಲಿಗೆ ಮೆರಿಟ್ ಕಂ ರಿಸರ್ವೇಷನ್ ಆಧಾರಿತ ಪ್ರವೇಶಗಳನ್ನು ಆನ್‌ಲೈನ್ ಮುಖಾಂತರ ನಡೆಸಲಾಗುತ್ತಿದ್ದು, ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ಮತ್ತು ಅರ್ಹ ಆಸಕ್ತ ಅಭ್ಯರ್ಥಿಗಳು www.cite.karnataka.gov.in ಮೂಲಕ ಆನ್‌ಲೈನ್‌ನಲ್ಲಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ಜೂನ್ 09 ರವರೆಗೆ ವಿಸ್ತರಿಸಲಾಗಿದೆ. ಚಿತ್ರದುರ್ಗದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಮಹಿಳಾ) ಯಲ್ಲಿ ಒಂದು ವರ್ಷ ಅವಧಿಯ COPA, ಎರಡು ವರ್ಷದ ಅವಧಿಯ ELECTRONICS, ELECTRICIAN, FITTR, TPES, MECHANIC ELECTRIC VEHICLE, ADVANCED CNC MACHINING ವೃತ್ತಿಗಳು ಲಭ್ಯವಿವೆ. ಈ ಸಂಸ್ಥೆಯು ಮಹಿಳಾ ಸಂಸ್ಥೆ ಆಗಿರುವುದರಿಂದ ಎಲ್ಲಾ ಸೀಟುಗಳು ಮಹಿಳೆಯರಿಗೆ ಹಂಚಿಕೆಯಾಗುತ್ತಿದ್ದು, ಹಂಚಿಕೆಯಾಗದೆ ಉಳಿದ ಸೀಟುಗಳನ್ನು ಪುರುಷರಿಗೆ ಹಂಚಿಕೆ ಮಾಡಲಾಗುತ್ತದೆ. ಆದುದರಿಂದ ಮಹಿಳೆಯರು ಈ ಅವಕಾಶವನ್ನು ಉಪಯೋಗಿಸಿಕೊಳ್ಳು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮಹಿಳಾ) ಪ್ರಾಚಾರ್ಯರು ಹಾಗೂ ದೂರವಾಣಿ ಸಂಖ್ಯೆ 08194–234515 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಮಹಿಳೆ ಕಾಣೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಕೋಗುಂಡೆ ಗ್ರಾಮದ ರೇಣುಕಮ್ಮ ಗಂಡ ಕೃಷ್ಣಪ್ಪ (48ವರ್ಷ) ಎಂಬ ಮಹಿಳೆ ಕಾಣೆಯಾದ ಕುರಿತು 2023ರ ಡಿಸೆಂಬರ್ 14 ರಂದು ಭರಮಸಾಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಮಹಿಳೆಯ ಚಹರೆ ಇಂತಿದೆ. ರೇಣುಕಮ್ಮ ಗಂಡ ಕೃಷ್ಣಪ್ಪ, 5 ಅಡಿ ಎತ್ತರ, ಕೋಲು ಮುಖ, ಗೋಧಿ ಬಣ್ಣ ತೆಳುವಾದ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಬಿಳಿ ಬಣ್ಣದ ಸೀರೆ ಮತ್ತು ಹಸಿರು ಬಣ್ಣದ ರವಿಕೆ ಧರಿಸಿರುತ್ತಾರೆ. ಈ ಮೇಲ್ಕಂಡ ಮಹಿಳೆಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ಭರಮಸಾಗರ ಠಾಣೆ ದೂ: 08194–258421, 9480803163, ಚಿತ್ರದುರ್ಗ ಕಂಟ್ರೋಲ್ ರೂಂ ಸಂಖ್ಯೆ 08194–222782 ಗೆ ಸಂಪರ್ಕಿಸಬಹುದು.

# ಶಿಕ್ಷಣದ ಬೇರು ಅತ್ಯಂತ ಕಹಿ ಆದರೆ ಅದರ ಫಲ ಜೇನಿನಂತೆ ಸಿಹಿಯಾಗಿರುತ್ತದೆ: ಹೆಚ್.ಬಿಲ್ಲಪ್ಪ

» ಹೊಸದುರ್ಗ

ಎಲ್ಲಾ ಕೇತ್ರಗಳಲ್ಲೂ ಸಹಾ ಇಂದು ಅಸಮಾನತೆ ಇದೆ, ಸಂವಿಧಾನದ ಆಶಯಗಳನ್ನ ಇಂದು ಈಡೇರಿಸಲು ಆಗುತ್ತಿಲ್ಲ ಶಿಕ್ಷಣದ ಬೇರು ಅತ್ಯಂತ ಕಹಿ ಆದರೆ ಅದರ ಫಲ ಜೇನಿನಂತೆ ಸಿಹಿಯಾಗಿರುತ್ತದೆ. ಶಿಕ್ಷಣ ಕೊಡಲು ಲಿಂಗಬೇದ ಇರಬಾರದು, ಶಿಕ್ಷಣ ಎಂಬುದು ಯಾರೂ ಸಹಾ ಕದಿಯಲಾರದ ಸಂಪತ್ತು ಎಂದು ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ ಅಭಿಪ್ರಾಯಿಸಿದರು.

ಪಟ್ಟಣದ ಸರ್ಕಾರಿ ಪಿ.ಯು. ಕಾಲೇಜು ಪ್ರೌಢಶಾಲಾ ವಿಭಾಗದ ವತಿಯಿಂದ ಆಯೋಜಿಸಲಾಗಿದ್ದ 2024 ಮತ್ತು 25 ನೇ ಸಾಲಿನ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳೀಗೆ ಪುಸ್ತಕ ಮತ್ತು ಸಮವಸ್ತ್ರಗಳನ್ನು ವಿತರಿಸಿ ಮಾತನಾಡಿದರು.ಕೆಲವು ಮಕ್ಕಳು ಬಡತನದಲ್ಲಿದ್ದರೆ ಇನ್ನು ಕೆಲವು ಶ್ರೀಮಂತ ಮಕ್ಕಳು,ಮತ್ತೆ ಕೆಲವು ಮಕ್ಕಳು ಕೂಲಿ ಕಾರ್ಮಿಕ ಮಕ್ಕಳು ಶಾಲೆಗೆ ಬರುತಿದ್ದಾರೆ, ಇಂತಹುಗಳನ್ನೆಲ್ಲ ನೋಡುತಿದ್ದರೆ ಇಲ್ಲಿ ಅಸಮಾನತೆ ಎಂಬುದು ಎದ್ದು ಕಾಣುತ್ತಿದೆ. ಹಾಗಾಗಿ ಎಲ್ಲಾ ವರ್ಗಕ್ಕೂ ಕೂಡ ಸೂಕ್ತವಾದ ಶಿಕ್ಷಣ ಸಿಕ್ಕಾಗ ಅಸಮಾನತೆಯನ್ನ ತೊಲಗಿಸಲು ಸಾಧ್ಯ ಎಂದು ತಿಳಿಸಿದರು.



ಉಪ ಪ್ರಾಂಶುಪಾಲರಾದ ನಾಗೇಂದ್ರಪ್ಪ ಮಾತನಾಡಿ ಈ ವರ್ಷವನ್ನ ಕಲಿಕಾ ಬಲವರ್ಧನಾ ವರ್ಷ ಎಂದು ಕರೆಯಲಾಗುತ್ತಿದ್ದು ಶಿಕ್ಷಣ ಇದ್ದವನು ಜಗತ್ತನ್ನೆ ಗೆಲ್ಲಬಹುದು. ಜ್ಞಾನದಿಂದ ಅಕ್ಷರ ಜ್ಯೋತಿಯನ್ನ ಹೋತ್ತಿಸಬೇಕಿದೆ. ಇಡೀ ಜಗತ್ತನ್ನ ಬದಲಾಯಿಸಲು ಬಳಸಬಹುದಾದ ಅತ್ಯಂತ ಶಕ್ತಿಯುತವಾದ ಅಸ್ತ್ರವೇ ಶಿಕ್ಷಣ ಎಂದು ವ್ಯಾಖ್ಯಾನಿಸಿದರು.

ಎಸ್.ಡಿ.ಎಂ.ಸಿ ಅಧ್ಯಕ್ಷ ಮಂಜುನಾಥ್ ಅಧ್ಯಕ್ಷತೆ ವಹಿಸಿದ್ದರು.

ಸಿ.ಆರ್.ಪಿ ನಂಜುಂಡಪ್ಪ, ಶಿಕ್ಷಕ ರುದ್ರೇಶ್, ಸೇರಿದಂತೆ ವಿವಿಧ ಶಾಲೆಗಳಿಂದ ಶಿಕ್ಷಕರು. ಪೋಷಕರು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಇದೇ ಕಾರ್ಯಕ್ರಮದಲ್ಲಿ ಎಲ್ಲಾ ಮಕ್ಕಳಿಗೂ ಪಠ್ಯಪುಸ್ತಕ ಹಾಗೂ 2 ಜೊತೆ ಸಮವಸ್ತ್ರ ವನ್ನು ವಿತರಿಸಲಾಯಿತು.

### ಅಸ್ತಮರೋಗ ನಿಯಂತ್ರಣಕ್ಕೆ ಜೂನ್‌8 ರಂದು ಉಚಿತ ಔಷಧ ವಿತರಣೆ: ಡಾ.ಎಚ್.ಸಿ.ತಿಪ್ಪೇಸ್ವಾಮಿ

» ಚಳ್ಳಕೆರೆ

ಇಲ್ಲಿನ ಗಾಂಧಿನಗರದ ಆಯುರ್ಷ್ ವೈದ್ಯ ಡಾ.ಎಚ್.ಸಿ.ತಿಪ್ಪೇಸ್ವಾಮಿ ಪ್ರತಿವರ್ಷದ ಮೃಗಶಿರಾ ಮಳೆ ಸಂದರ್ಭದಲ್ಲಿ ತಮ್ಮ ಸ್ವಗೃಹದಲ್ಲೇ ಅಸ್ತಮ ರೋಗಿಗಳಿಗೆ ಉಚಿತವಾಗಿ ಔಷಧಿಯನ್ನು ಕಳೆದ ಸುಮಾರು 40 ವರ್ಷಗಳಿಂದ ವಿತರಣೆ ಮಾಡುತ್ತಿದ್ದು, ಜೂನ್‌8ರ ಶನಿವಾರ ಬೆಳಗ್ಗೆ 6.44ಕ್ಕೆ ಔಷಧವನ್ನು ವಿತರಣೆ ಮಾಡಲಿದ್ದು, ಅಸ್ತಮ ರೋಗಿಗಳು ಎರಡು ಗಂಟೆ ಮುಂಚಿತವಾಗಿ ಸ್ಥಳಕ್ಕೆ ಆಗಮಿಸಿ ತಮ್ಮ ಹೆಸರು ನೋಂದಾಯಿಸಿ ಔಷಧ ಪಡೆದುಕೊಳ್ಳುವಂತೆ ಮನವಿ ಮಾಡಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಚಳ್ಳಕೆರೆ ತಾಲ್ಲೂಕು ಸೇರಿದಂತೆ ಜಿಲ್ಲೆ ವಿವಿಧ ಭಾಗಗಳು ಹಾಗೂ ಆಂಧ್ರಪ್ರದೇಶದಿಂದಲೂ ಸಹ ಪ್ರತಿವರ್ಷ ಸಾವಿರಾರು ಸಂಖ್ಯೆಯಲ್ಲಿ ಅಸ್ತಮರೋಗಿಗಳು ಹಿಂದಿನ ದಿನರಾತ್ರಿಯೇ ತಮ್ಮ ಮನೆಯ ಮುಂದೆ ಬಂದು ಸೇರುತ್ತಾರೆ. ಅಸ್ತಮ ಪೀಡಿತರು ಈ ಔಷಧವನ್ನು ಪಡೆದು ಉಪಯೋಗಿಸಿದಲ್ಲಿ ಅಸ್ತಮ ನಿಯಂತ್ರಿಸಬಹುದು. ಪ್ರಾರಂಭದ ಹಂತದಲ್ಲೇ 14 ದಿನಗಳ ಕಾಲ ಮಾತ್ರ ಹಸಿತರಕಾರಿ, ಕರಿದ ಪದಾರ್ಥ, ಮಾಂಸಹಾರದಿಂದ ದೂರವಿರಬೇಕು, ಜೀವನಪರ್ಯಂತ ಕರಿಕುಂಬಳ, ಹಲಸಿನಹಣ್ಣು, ಗಿಣ, ಹೊಲದ ಅವರೆಕಾಯಿ ತಿನ್ನದಂತೆ ದೂರವಿರಬೇಕೆಂದು ಮನವಿ ಮಾಡಿದ್ದಾರೆ.

**ಪ್ರಮುಖ ಸುದ್ದಿ**

# ವಾಲ್ಮೀಕಿ ನಿಗಮ ಹಗರಣ: ಖಜಾನೆ ಹಗಲು ದರೋಡೆ

» ಚಿತ್ರದುರ್ಗ

ರಾಜ್ಯದಲ್ಲಿ ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಸರ್ಕಾರದ ಖಜಾನೆನಿರಂತರವಾಗಿಲೂಟಿಯಾಗುತ್ತಿದೆ. ವಾಲ್ಮೀಕಿ ನಿಗಮ ಹಗರಣ ಸರ್ಕಾರದ ಖಜಾನೆಯ ಹಗಲು ದರೋಡೆಯಾಗಿದೆ. ಚುನಾವಣೆಯ ಹಿನ್ನಲೆಯಲ್ಲಿ ನೆರೆ ರಾಜ್ಯವಾದ ಹೈದರಾಬಾದ್ ಮತ್ತು ತೆಲಂಗಾಣಕ್ಕೆ ಹಣ ಹೋಗಿದೆ. ಮುಖ್ಯಮಂತ್ರಿಗಳು ಇದುವರೆವಿಗೂ ಯಾವುದೇ ಹೇಳಿಕೆಯನ್ನು ನೀಡಿಲ್ಲ ಎಂದು ಮಾಜಿ ಉಪಮುಖ್ಯಮಂತ್ರಿ ಮಾಜಿ ಸಚಿವರಾದ ಗೋವಿಂದ ಕಾರಜೋಳ ದೂರಿದ್ದಾರೆ.

ಚಿತ್ರದುರ್ಗ ನಗರದ ಬಿಜೆಪಿ ಜಿಲ್ಲಾ ಘಟಕದ ಕಚೇರಿಯಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಅಸ್ತಿತ್ವಕ್ಕೆ ಬಂದು ಒಂದು ವರ್ಷ ಆಗಿದೆ. ಸರ್ಕಾರಿ ಖಜಾನೆಯ ಹಗಲು ದರೋಡೆ ಆಗಿದೆ 'ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ರೂ. ಗಳನ್ನು ನೇರವಾಗಿ ಖಜಾನೆಯಿಂದ ನೆರೆ ರಾಜ್ಯಗಳ ಲೋಕಸಭಾ ಚುನಾವಣೆಗೆ ಹೋಗಿರುವ ಗುಮಾನಿ ಇದೆ. ಆಂಧ್ರದ ಒಂಬತ್ತು ಕಂಪನಿಗಳಿಗೆ ಹಣ ಹೋಗಿದೆ' ಎಂದು ತಿಳಿಸಿದರು.'ಚಂದ್ರಶೇಖರ್ ಅವರ ಡೆತ್‌ನೋಟ್‌ನಲ್ಲಿ ಉಪಖಾತೆ ತೆರೆಯಲು ಸಚಿವರೇ ಮೌಖಿಕ ಆದೇಶ ನೀಡಿದ್ದರು ಎನ್ನುವುದನ್ನು ಸ್ಪಷ್ಟವಾಗಿ ಉಲ್ಲೇಖಿಸಿದ್ದಾರೆ. ಉಪಖಾತೆ ತೆರೆದ ನಂತರ ಚೆಕ್‌ಬುಕ್, ಪಾಸ್‌ಬುಕ್ ತೆಗೆದುಕೊಂಡಿರಲಿಲ್ಲ. ಇದಕ್ಕೆ ಎಂಡಿ ಆದೇಶ ಇತ್ತು. ಪ್ರಕರಣ ಬಯಲಿಗೆ ಬಂದು ಇಷ್ಟು ದಿನ ಆದರೂ ಸಿಎಂ,ಡಿಸಿಎಂ ಸೇರಿದಂತೆ ಸಚಿವರು ಬಾಯಿ ಬಿಡುತ್ತಿಲ್ಲ' ಎಂದು ಅವರು ಸಿದ್ದರಾಮಯ್ಯ ಜನತಾ ಪರಿವಾರದಲ್ಲಿ ಮೌಲ್ಯಾಧಾರಿತ ರಾಜಕಾರಣ ಮಾಡಿದ್ದರು. ಲಾಲ್ ಬಹದ್ದೂರ್ ಶಾಸ್ತ್ರೀ ಅವರು ಸಣ್ಣ ರೈಲು ಅಪಘಾತಕ್ಕೆ ರಾಜೀನಾಮೆ ನೀಡಿದ್ದರು. ರಾಮಕೃಷ್ಣ ಹೆಗಡೆ ಅವರು ಟೆಲಿಫೋನ್ ಕದ್ದಾಲಿಕೆ ಆರೋಪ ಬಂದಾಗಲೂ ರಾಜೀನಾಮೆ ಕೊಟ್ಟಿದ್ದರು' ಎಂದರು.

'ಎಸ್‌ಐಟಿ, ಸಿಓಡಿ ತನಿಖೆಯಿಂದ ನಿಸ್ಪಕ್ಷಪಾತ ತನಿಖೆ ಸಾಧ್ಯ ಇಲ್ಲ. ಶೆಡ್ಯೂಲ್ಡ್ ಬ್ಯಾಂಕ್ ಆಗಿರುವುದರಿಂದ ಈ ಸಂಸ್ಥೆಗಳಿಂದ ತನಿಖೆ ಸರಿಯಲ್ಲ. ಕೇಂದ್ರದ ತನಿಖಾ ಸಂಸ್ಥೆಗಳಿಂದ ತನಿಖೆ ಆಗಬೇಕು. ಆರ್ಥಿಕ ವರ್ಷಾಂತ್ಯಕ್ಕೆ ಎಲ್ಲ ಇಲಾಖೆ, ನಿಗಮಗಳಿಂದ ಆಡಿಟ್ ಆಗುತ್ತದೆ. ಆಗ ಈ ಹಣ ವರ್ಗಾವಣೆ ವಿಚಾರ ಬಯಲಿಗೆ ಬರಬೇಕಿತ್ತು. ಆದರೂ ಬಂದಿಲ್ಲ ಎಂದರೆ ಇದರಲ್ಲಿ ಸರ್ಕಾರದ ಪಾತ್ರ ಇದೆ. ಹಾಗಾಗಿ ರಾಜೀನಾಮೆ ಕೊಡಬೇಕು' ಎಂದು ಆಗ್ರಹಿಸಿ ಇಡೀ ಸಂಪುಟ ಪ್ರಕರಣ ಮುಚ್ಚಿ ಹಾಕುವ ಪ್ರಯತ್ನ ಮಾಡುತ್ತಿರುವುದು ಖಂಡನೀಯ. ರಾಜ್ಯದ ಆರ್ಥಿಕ ಇಲಾಖೆಯ ನೇರ ಹೊಣೆ ಇರುವ ಹುಜುರ್ ಖಾತೆಯಿಂದಲೂ 44 ಕೋಟಿ ರೂ.ಹೋಗಿದೆ. ಇದನ್ನೆಲ್ಲಾ ಗಮನಿಸಿದಾಗ ಸರ್ಕಾರ ಹಗಲು ದರೋಡೆ ಮಾಡಿದೆ' ಎಂದು ತಿಳಿಸಿದರು. 'ದಾವಣಗೆರೆಯಲ್ಲಿ ಗುತ್ತಿಗೆದಾರ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. 80 ಲಕ್ಷ ರೂ.ಬಿಲ್ ಕೊಡಲು ಕಮಿಷನ್‌ಗೆ ಸತಾಯಿಸಿದ್ದಾರೆ. ಈ ಕಾರಣಕ್ಕೆ ಆತ್ಮಹತ್ಯೆ ಆಗಿದೆ. ಈಶ್ವರಪ್ಪ ಪ್ರಕರಣದಲ್ಲಿ ಸಿದ್ದರಾಮಯ್ಯ ಮರಣದಂಡನೆಗೆ ಗುರಿಪಡಿಸಬೇಕು ಎಂದಿದ್ದರು. ಈಗ ಯಾಕೆ ಸುಮ್ಮನಿದ್ದಾರೆ' ಎಂದು ಪ್ರಶ್ನಿಸಿದ ಕಾರಜೋಳ ರವರು ರಾಜ್ಯದಲ್ಲಿ ನಡೆಯುತ್ತಿರುವ ವಿಧಾನ ಪರಿಷತ್ ಚುನಾವಣೆಯ ಆರು ಕ್ಷೇತ್ರಗಳಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ' ಎಂದರು.




ವಿಧಾನಪರಿಷತ್ ಸದಸ್ಯಕೆ.ಎಸ್.ನವೀನ್ ಮಾತನಾಡಿ, 'ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಸದಾ ಶೋಷಿತರ ಪರ ಎಂದು ಹೇಳುತ್ತಾ ಅವರ ಹಣವನ್ನೇ ಯಾಕೆ ಬೇನಾಮಿ ಕಂಪನಿಗಳಿಗೆ ವರ್ಗಾವಣೆ ಮಾಡಿಸಿ ದರೋಡೆ ಮಾಡಿಸಿದ್ದೀರಿ. ಚಿತ್ರದುರ್ಗ ಭಾಗದಲ್ಲಿ ವಾಲ್ಮೀಕಿ ಸಮುದಾಯದ ಅಭಿವೃದ್ಧಿಗೆ ಬಳಕೆ ಆಗಬೇಕಾಗಿತ್ತು. ಇಲ್ಲಿ ನಿಗಮದಲ್ಲಿ ಕೇಳಿದರೆ ಯಾವ ಸೌಲಭ್ಯವನ್ನೂ ಕೊಡುವುದಿಲ್ಲ. ಅದೇ ಹಣ ಬೇನಾಮಿ ಕಂಪನಿಗಳಿಗೆ ವರ್ಗಾವಣೆ ಮಾಡಿದ್ದಾರೆ' ಎಂದರು.


ಪುಟ 3



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ಮಾಜಿ ಸೈನಿಕ ದೃಢೀಕರಣ ಪತ್ರ ಪಡೆಯಲು ಕೋರಿಕೆ

» **ಚಿತ್ರದುರ್ಗ**

2024–25ನೇ ಶೈಕ್ಷಣಿಕ ಸಾಲಿನಲ್ಲಿ ಮಾಜಿ ಸೈನಿಕರು, ಮಾಜಿ ಸೈನಿಕ ಅವಲಂಬಿತರ ಮಕ್ಕಳ ವ್ಯಾಸಂಗಕ್ಕಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ನೀಡಲಾಗುವ ಮಾಜಿ ಸೈನಿಕ ಮೀಸಲಾತಿ ಹಾಗೂ ಇತರೆ ಸೌಲಭ್ಯಗಳಿಗೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಿಂದ ವಿತರಿಸಲಾಗುವ ಮಾಜಿ ಸೈನಿಕ ದೃಢೀಕರಣ ಪತ್ರವನ್ನು ಕೊನೆಯ ದಿನಾಂಕದವರೆಗೆ ಕಾಯದೇ ಸೂಕ್ತ ಸಮಯದಲ್ಲಿ ಪಡೆದುಕೊಳ್ಳಲು ಕೋರಿದೆ. ಎಲ್ಲಾ ವೃತ್ತಿಪರ ಶಿಕ್ಷಣಗಳಿಗಾಗಿ ಕರ್ನಾಟಕ ಸಾಮಾನ್ಯ ಪ್ರವೇಶ ಪರೀಕ್ಷೆಗೆ (ಕೆ.ಸಿ.ಇ.ಟಿ) ಮಾಜಿ ಸೈನಿಕ ಕೋಟಾದಡಿಯಲ್ಲಿ ಅರ್ಜಿ ಸಲ್ಲಿಸಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಿಂದ ವಿತರಿಸಲಾಗುವ ಮಾಜಿ ಸೈನಿಕ ದೃಢೀಕರಣ ಪತ್ರವನ್ನು ಒಂದು ವೇಳೆ ಅಪ್‌ಲೋಡ್ ಮಾಡದಿದ್ದಲ್ಲಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಕಛೇರಿಯನ್ನು ದಿನಾಂಕ 03–06–2024 ರೊಳಗಾಗಿ ಕಛೇರಿ ವೇಳೆಯಲ್ಲಿ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಖುದ್ದಾಗಿ ಸಂಪರ್ಕಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇವರ ದೂರವಾಣಿ ಸಂಖ್ಯೆ 08182–220925 ಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

### ಕೆ.ಎಸ್.ಬಿ ಜಾಲತಾಣ: ಸುಗಮವಾಗಿ ಕಾರ್ಯ

» **ಚಿತ್ರದುರ್ಗ**

ಕೇಂದ್ರೀಯ ಸೈನಿಕ ಮಂಡಳಿ (ಕೆ.ಎಸ್.ಬಿ) ಯ ಜಾಲತಾಣದ ತಾಂತ್ರಿಕ ದೋಷವನ್ನು 2024ರ ಮೇ 24 ರಿಂದ ಸರಿಪಡಿಸಲಾಗಿದ್ದು, ಪ್ರಸ್ತುತ ಸುಗಮವಾಗಿ ಕಾರ್ಯ ನಿರ್ವಹಿಸುತ್ತಿದೆ. ಕೇಂದ್ರೀಯ ಸೈನಿಕ ಮಂಡಳಿಯಿಂದ ನೀಡಲಾಗುವ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಬಾಕಿಯಿರುವವರು ಕೂಡಲೇ ಅರ್ಜಿಯನ್ನು ಸಲ್ಲಿಸಿ, ಅರ್ಜಿ ಸಲ್ಲಿಸಿದ ಪ್ರತಿ ಹಾಗೂ ಸಂಬಂಧಿತ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಕಛೇರಿಗೆ ಖುದ್ದಾಗಿ ಭೇಟಿ ನೀಡಿ ಅನುಮೋದನೆ ಪಡೆಯಬೇಕಾಗಿ ಕೋರಲಾಗಿದೆ.

### ಮತ ಎಣಿಕೆ ತರಬೇತಿ

» **ಚಿತ್ರದುರ್ಗ**

ಚಿತ್ರದುರ್ಗ ಲೋಕಸಭಾ ಚುನಾವಣೆಯ ಎರಡನೇ ಹಂತದ ಮತ ಎಣಿಕೆ ತರಬೇತಿಯನ್ನು ಶನಿವಾರ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಉದ್ಘಾಟಿಸಿದರು. ಜಿಲ್ಲಾ ಸಹಾಯಕ ಚುನಾವಣಾ ಅಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು, ಮತ ಎಣಿಕೆ ಸಿಬ್ಬಂದಿ ತರಬೇತಿ ಕಾರ್ಯಗಾರ ಕುರಿತು ಪ್ರಾಸ್ತಾವಿಕವಾಗಿ ಮಾರ್ಗದರ್ಶನ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಾಸ್ಟರ್ ಟ್ರೈನರ್ ಎಸ್.ನಾಗಭೂಷಣ್, ಜಿಲ್ಲಾ ತರಬೇತಿ ಮತ್ತು ನಿರ್ವಹಣಾ ಕೋಶದ ನೋಡಲ್ ಅಧಿಕಾರಿ ಜಗದೀಶ್ ಹೆಬ್ಬಳ್ಳಿ ಸೇರಿದಂತೆ ಸಹಾಯಕ ಚುನಾವಣಾಧಿಕಾರಿಗಳು ಹಾಗೂ ಮತ ಎಣಿಕೆ ಸಿಬ್ಬಂದಿಗಳು ಇದ್ದರು.

### ಅಪಘಾತ: ಬೆಳಗೆರೆ ದಂಡ್ಡಜ್ಜರಶಿವಲಿಂಗಪ್ಪ ಸ್ಥಳದಲ್ಲೇ ಸಾವು.

» **ಚಳ್ಳಕೆರೆ**

ತಾಲ್ಲೂಕಿನಬೆಳಗೆರೆಗ್ರಾಮದದಂಡ್ಡಜ್ಜರಶಿವಲಿಂಗಪ್ಪ (56) ಹಿರಿಯೂರು ಗ್ರಾಮಾಂತರ ವ್ಯಾಪ್ತಿಯಲ್ಲಿ ನಡೆದ ಅಪಘಾತದಲ್ಲಿ ಮೃತಪಟ್ಟಿರುತ್ತಾರೆ. ಮೃತರು ಪತ್ನಿ, ಒಂದು ಗಂಡು, ಒಂದು ಹೆಣ್ಣು ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಗ್ರಾಮದ ಜಮೀನಿನಲ್ಲಿ ಶನಿವಾರ ಸಂಜೆ ನಡೆಯಿತು ಎಂದು ಸಹೋದರ ಬಿ.ವಿ.ಕೃಷ್ಣಪ್ಪ ತಿಳಿಸಿದ್ಧಾರೆ.

### ಅಪರಿಚಿತ ವಾಹನ ಡಿಕ್ಕಿ : ವ್ಯಕ್ತಿ ದುರ್ಮರಣ

» **ಹೊಸದುರ್ಗ**

ರಸ್ತೆಯ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಪಾದಚಾರಿಯೋರ್ವರಿಗೆ ಅಪರಿಚಿತ ವಾಹನವೊಂದು ರಭಸವಾಗಿ ಡಿಕ್ಕಿ ಪಡಿಸಿದ ಪರಿಣಾಮ ವ್ಯಕ್ತಿಯೋರ್ವ ಸ್ಥಳದಲ್ಲೆ ದುರ್ಮರಣ ಹೊಂದಿರುವ ಘಟನೆ ಪಟ್ಟಣದ ತರೀಕೆರೆ ರಸ್ತೆಯ ಬದಿಯಲ್ಲಿ ಶನಿವಾರ ಮುಂಜಾನೆ ಸಂಭವಿಸಿದೆ. ಮೃತ ವ್ಯಕ್ತಿಯನ್ನ ಮೂಲತಹ ಶಿವಮೊಗ್ಗ ನಗರದ ವಾಸಿ ತಿಮ್ಮಪ್ಪ ಎಂಬುವವರ ಪುತ್ರ ನಾಗರಾಜ (45) ಎಂದು ತಿಳಿದು ಬಂದಿದ್ದು ಮೃತ ನಾಗರಾಜ ಎಂಬುವವರು ಪಟ್ಟಣದ ತನ್ನ ಮಗನ ಹೆಂಡತಿಯ (ಮೃತನ ಸೊಸೆ) ಊರಾದ ಹೊಸದುರ್ಗ ಪಟ್ಟಣದ ಎನ್.ಇ.ಎಸ್ ಬಡಾವಣೆಯಲ್ಲಿ ವಾಸವಾಗಿದ್ದ ತನ್ನ ಮಗನ ಹೆಂಡತಿಯ ಮನೆಗೆ ಕಳೆದ ನಾಲ್ಕು ದಿನಗಳ ಹಿಂದೆ ಬಂದಿದ್ದರು. ಮೃತ ನಾಗರಾಜ ಪತ್ನಿ ಕೆಲವು ದಿನಗಳ ಹಿಂದೆಯಷ್ಟೇ ಸಾವನ್ನಪ್ಪಿದ್ದರು ಎಂದು ತಿಳಿದು ಬಂದಿದ್ದು ನಾಗರಾಜ ಶನಿವಾರ ಮುಂಜಾನೆ ಸುಮಾರು 5.30 ರ ಸಮಯದಲ್ಲಿ ವಾಯು ವಿಹಾರಕ್ಕೆ ಹೋಗುವಾಗಿ ಈ ಘಟನೆ ಸಂಭವಿಸಿದ್ದು ಸ್ಥಳಕ್ಕೆ ಸಿಪಿಐ ತಿಮ್ಮಣ್ಣ ಬೇಟಿ ನೀಡಿ ಪರಿಶೀಲಿಸಿದರು. ಈ ಬಗ್ಗೆ ಹೊಸದುರ್ಗ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬಯಕೆ ಈಡೇರಿಕೆಗೆ ತಮ್ಮದೇ ಆದ ಜ್ಞಾನ ವಿವೇಕ ಇಟ್ಟುಕೊಂಡು ಬೆಳೆಯಬೇಕಾಗುತ್ತದೆ: ಸ್ವಾಮೀಜಿ

» **ಹೊಸದುರ್ಗ**

ಯಾವುದೇ ವ್ಯಕ್ತಿ ಏನಾದರೂ ಸಾಧನೆ ಮಾಡಬೇಕೆಂದು ಬಯಸುತ್ತಾರೆ ಆ ಬಯಕೆ ಈಡೇರಿಗಿಗೆ ತಮ್ಮದೇ ಆದ ಜ್ಞಾನ ವಿವೇಕ ಇಟ್ಟುಕೊಂಡು ಬೆಳೆಯಬೇಕಾಗುತ್ತದೆ ಆರ್.ಲಕ್ಷ್ಮಯ್ಯ ವರು ಶಿಕ್ಷಣ ಕ್ಷೇತ್ರದಲ್ಲಿ ಸುದೀರ್ಘ ಸೇವೆ ಸಲ್ಲಿಸಿದ್ದಾರೆ ಹಲವು ವಿದ್ಯಾರ್ಥಿಗಳಿಗೆ ಸ್ಪೂರ್ತಿಯಾಗಿದ್ದಾರೆ ಸಮಾಜಕ್ಕೆ ಸೇವೆ ಮಾಡಬೇಕು ಎಂಬ ಬಯಕೆ ಅವರದ್ದಾಗಿದೆ ಎಂದು ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ತಿಳಿಸಿದರು.

ಹೊಸದುರ್ಗ ಸರಕಾರಿ ಶಿಕ್ಷಕರ ತರಬೇತಿ ಸಂಸ್ಥೆಯಲ್ಲಿ ಪ್ರಶಿಕ್ಷಕರಾಗಿ ಸೇವೆ ಸಲ್ಲಿಸಿ ವಯೋನಿವೃತ್ತರಾದ ಆರ್.ಲಕ್ಷ್ಮಯ್ಯ ಅವರಿಗೆ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಆರ್ ಲಕ್ಷ್ಮಯ್ಯ ಅವರು ಸರಕಾರಿ ನೌಕರಿಯಲ್ಲಿ ಸುದೀರ್ಘ ಸೇವೆ ಸಲ್ಲಿಸಿ



ನಿವೃತ್ತರಾಗುತ್ತಿದ್ದಾರೆ ಅವರ ಮುಂದಿನ ದಿನದಲ್ಲಿ ಮತ್ತಷ್ಟು ಸಮಾಜಮುಖಿ ಸೇವೆ ಮಾಡುವ ಮೂಲಕ ಸಮಾಜಕ್ಕೆ ಹೆಚ್ಚಿನ ಕೊಡುಗೆ ಕೊಡಬೇಕು

ಅವರು ಅನೇಕ ಪದವಿ ಪಡೆದರು ಗರ್ವ ಬಂದಿಲ್ಲ ಅವರು ವೃತ್ತಿಯಲ್ಲಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುವ ಮೂಲಕ ಹೆಚ್ಚಿನ ಜನರನ್ನು ಸಂಪಾದಿಸುತ್ತಾರೆ ಜೀವನದಲ್ಲಿ ಸುಖದ ಜೊತೆಗೆ ಕಷ್ಟವೂ ಬರುತ್ತದೆಅದನ್ನುಸವಾಲಾಗಿಸ್ವೀಕರಿಸಿದಾಗ ಮಾತ್ರ ಮೇಲೆ ಬರಲು ಸಾಧ್ಯ ಆತ್ಮವಿಶ್ವಾಸ ಹಾಗೂ ನಂಬಿಕೆ ಇದ್ದಲ್ಲಿ ಮಾತ್ರ ಏನು ಬೇಕಾದರೂ ಸಾಧನೆ ಮಾಡಬಹುದು ಇಂಥ ಗುಣವನ್ನು ನಾವು ಲಕ್ಷಣ ಲಕ್ಷ್ಮಯ್ಯ ಅವರಲ್ಲಿ ಕಂಡಿದ್ದು ಅವರ ಇಂತಹ ಶ್ರೇಷ್ಠ ಗುಣ ಇನ್ನೂ ನಿವೃತ್ತಿಯ ನಂತರವೂ ಹೆಚ್ಚಿನದಾಗಿ ಬೆಳೆಯಲಿ ಸಮಾಜಮುಖಿ ಸೇವೆ ಆಗಲೇ ಹೆಚ್ಚಾಗಲಿ ಎಂದು ಶುಭ ಹಾರೈಸಿದರು.

ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ಎಚ್ ಬಿಲ್ಲಪ್ಪ ಮಾತನಾಡಿ ಲಕ್ಷ್ಮಯ್ಯ ಅವರಲ್ಲಿ ಎರಡು ಅತ್ಯುತ್ತಮವಾದ ಶ್ರೇಷ್ಠ ಗುಣಗಳನ್ನು ಗಮನಿಸಿದ್ದೇನೆ ಅದರಲ್ಲಿ ಅವರು ಸದಾಕಾಲ ಲವಲವಿಕೆಯಿಂದ ಜೀವನ ನಡೆಸುತ್ತಿರುವುದರಿಂದ ಅವರ ಆರೋಗ್ಯ ಹೆಚ್ಚಾಗಿದೆ ಹಾಗೆಯೇ ಅವರ ಜೀವನದಲ್ಲಿ ಎದುರಾಗುವ ಈಗ ಸಮಸ್ಯೆಗಳನ್ನು ಸವಾಲಾಗಿ ಸ್ವೀಕರಿಸುವ ಗುಣ ಇರುವುದರಿಂದ ಅವರು ಪ್ರತಿ ಜೀವನವನ್ನು ಉತ್ತಮವಾಗಿ ನಿಭಾಯಿಸಿ ಇಂದು ನಿವೃತ್ತರಾಗುತ್ತಿದ್ದು ಅವರ ಸೇವೆ ಹೀಗೆ ನಿರಂತರವಾಗಿ ಮುಂದುವರೆಯಲಿ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಆಗ್ನೇಯ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಉಪ್ಪಾರ ಸಂಘದ ತಾಲೂಕು ಅಧ್ಯಕ್ಷ ಪಿ.ಕೆ.ಪರಪ್ಪ, ಶ್ರೀಮತಿಓಂಕಾರಮ್ಮ ಆರ್.ಲಕ್ಷ್ಮಯ್ಯ, ನಿವೃತ್ತ ಆಡಿಟರ್ ಮಲ್ಲೇಶಪ್ಪ, ಕೆಇಬಿ ಎಂಜಿನಿಯರ್ ಜಯಣ್ಣ, ತಾಲೂಕು ನೌಕರರ ಸಂಘದ ಅಧ್ಯಕ್ಷ ಗಂಗಾಧರ್, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಪರಮೇಶಪ್ಪ,ಚಿತ್ರದುರ್ಗ ಡಯಟ್‌ನ ಪ್ರಾಂಶುಪಾಲ ,ನಾಸೀರ್ಉದ್ದೀನ್, ಹೊಸದುರ್ಗ ಟಿ.ಸಿ.ಹೆಚ್, ಕಾಲೇಜಿನ ಪ್ರಾಂಶಯುಪಾಲ ನಟರಾಜ್, ಪಿ.ಎಲ್. ಕರಿಯಪ್ಪ, ಎನ್.ರಾಮಚಂದ್ರಪ್ಪ ಜಿ.ಇ.ಅಜ್ಜಯ್ಯ. ಬಿ.ಆರ್.ಶಶಿಧರ್ ಉಪನ್ಯಾಸಕರಾದ ಕಾಂತರಾಜು, ಜಗದೀಶ್, ಬಿ.ಪಿ.ಓಂಕಾರಪ್ಪ ಸೇರಿದಂತೆ ಸಿಬ್ಬಂಧಿ ವರ್ಗದವರು ಉಪಸ್ಥಿತರಿದ್ದರು. ಮುಂತಾದವರು ಉಪಸ್ಥಿತರಿದರು.

ಕಾರ್ಯಕ್ರಮದ ನಂತರ ಸುಮಾರು ಎರಡುಗಂಟೆಗಳಕಾಲಆರ್.ಲಕ್ಷ್ಮಯ್ಯಅವರ ಅಭಿಮನಿಗಳು, ಸುಬ್ಬಂಧಿವರ್ಗಧವರು, ಬಂಧುಗಳು ಅನೇಕ ಇಲಾಖೆಯ ಸಿಬ್ಬಂಧಿ ವರ್ಗದವರು ಹಾಗೂ ಅಪಾರ ಶಿಷ್ಯವೃಂದ ಅವರನ್ನ ಸನ್ಮಾನಿಸಿ ಗೌರವಿಸಿತು.




**ಅಬಕಾರಿ ಇಲಾಖೆಯಲ್ಲಿ ಉಪ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿ ಈ ದಿನ ವಯೋನಿವೃತ್ತಿ ಹೊಂದುತ್ತಿರುವ ಕೆ. ತಿಪ್ಪೇಸ್ವಾಮಿಯವರಿಗೆ ಅಬಕಾರಿ ಇಲಾಖೆಯ ವತಿಯಿಂದ ಆತ್ಮೀಯವಾಗಿ ಬೀಳ್ಕೊಡುಗೆ ನೀಡಲಾಯಿತು. ಈ ಬೀಳ್ಕೊಡುಗೆ ಸಮಾರಂಭದಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಕೆ.ತಿಪ್ಪೇಸ್ವಾಮಿಯವರ ಬಂಧು ವರ್ಗದವರು ಉಪಸ್ಥಿತರಿದ್ದರು.**

### ಬಾಪೂಜಿ ಶಿಕ್ಷಣ ವಿದ್ಯಾಲಯದಲ್ಲಿ ಬಿಇಡಿ. ಪ್ರಶಿಕ್ಷಣಾರ್ಥಿಗಳಿಗೆ ಉಚಿತ ಆರೋಗ್ಯ ತಪಾಸಣೆ



» **ಚಿತ್ರದುರ್ಗ**

ರಾಷ್ಟ್ರೀಯ ಹೆದ್ದಾರಿ–13 ಪಿಳ್ಳೆಕೆರನಹಳ್ಳಿಯಲ್ಲಿರುವ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಬಿ.ಇ.ಡಿ. ಪ್ರಶಿಕ್ಷಣಾರ್ಥಿಗಳಿಗೆ ಶುಕ್ರವಾರ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು. ರಕ್ತದೊತ್ತಡ ಹಾಗೂ ಶುಗರ್ ತಪಾಸಣೆ ನಡೆಸಿ ಸೂಕ್ತ ಸಲಹೆಗಳನ್ನು ಪ್ರಶಿಕ್ಷಣಾರ್ಥಿಗಳಿಗೆ ನೀಡಲಾಯಿತು. ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಶ್ರೀಮತಿ ಎಂ.ಆರ್. ಜಯಲಕ್ಷ್ಮಿ ಹಾಗೂ ಸಿಬ್ಬಂದಿಯವರು ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಹಾಜರಿದ್ದರು.

# ಮುಂಗಾರು ಹಂಗಾಮಿಗೆ ಬೆಳೆವಿಮೆ ನೋಂದಣಿ ಆರಂಭ

» **ಚಿತ್ರದುರ್ಗ**

ಜಿಲ್ಲೆಯಲ್ಲಿ 2024–25ನೇ ಸಾಲಿನ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಜಾರಿಗೊಳಿಸಿ ಅಧಿಸೂಚಿಸಲಾಗಿದ್ದು, ನೋಂದಣಿ ಪ್ರಕ್ರಿಯೆ ಪ್ರಗತಿಯಲ್ಲಿದೆ. ಹೆಸರು (ಮಳೆ ಆಶ್ರಿತ), ಈರುಳ್ಳಿ (ನೀರಾವರಿ) ಬೆಳೆ ವಿಮಾ ನೊಂದಣಿಗೆ 2024ರ ಜುಲೈ 15 ಕೊನೆಯ ದಿನ. ಮುಸುಕಿನ ಜೋಳ (ನೀರಾವರಿ) (ಮಳೆಯಾಶ್ರಿತ), ಜೋಳ (ನೀರಾವರಿ) (ಮಳೆಯಾಶ್ರಿತ), ಸಜ್ಜೆ(ಮಳೆಯಾಶ್ರಿತ), ಸಾವೆ(ಮಳೆಯಾಶ್ರಿತ), ತೊಗರಿ(ಮಳೆಯಾಶ್ರಿತ), ಹುರುಳಿ (ಮಳೆಯಾಶ್ರಿತ), ಸೂರ್ಯಕಾಂತಿ (ನೀರಾವರಿ)(ಮಳೆಯಾಶ್ರಿತ), ಎಳ್ಳು(ಮಳೆಯಾಶ್ರಿತ), ನೆಲಗಡಲೆ(ಶೇಂಗಾ)(ನೀರಾವರಿ) (ಮಳೆಯಾಶ್ರಿತ), ಹತ್ತಿ(ನೀರಾವರಿ) (ಮಳೆಯಾಶ್ರಿತ), ಟೊಮ್ಯಾಟೋ, ಈರುಳ್ಳಿ(ಮಳೆಯಾಶ್ರಿತ), ಕೆಂಪು ಮೆಣಸಿನಕಾಯಿ (ಮಳೆಯಾಶ್ರಿತ) ಬೆಳೆಗಳಿಗೆ ವಿಮೆ ನೊಂದಣಿಗೆ 2024ರ ಜುಲೈ 31 ಕೊನೆಯ ದಿನವಾಗಿದೆ.

ಭತ್ತ (ನೀರಾವರಿ) ರಾಗಿ(ನೀರಾವರಿ) (ಮಳೆಯಾಶ್ರಿತ), ನವಣೆ (ಮಳೆಯಾಶ್ರಿತ) ಬೆಳೆಗಳ ವಿಮಾ ನೊಂದಣಿಗೆ 2024ರ ಆಗಸ್ಟ್ 16 ಕೊನೆಯ ದಿನವಾಗಿದೆ. ಈ ಎಲ್ಲಾ ಬೆಳೆಗಳಿಗೆ ವಿಮೆಗೆ ನೋಂದಾಯಿಸಲು ಅಧಿಸೂಚನೆ ಮಾಡಲಾಗಿದ್ದು, ತಮ್ಮ ಹೋಬಳಿ ಮಟ್ಟದ ಬೆಳೆಯ ವಿವರವನ್ನು ಸಂಬಂಧಪಟ್ಟ ಕೃಷಿ ಅಧಿಕಾರಿಗಳು ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಲು ಕೋರಿದೆ. ಬ್ಯಾಂಕಿನಲ್ಲಿ ಬೆಳೆ ಸಾಲ ಮಂಜೂರಾದ ಎಲ್ಲಾ ರೈತರನ್ನು ಕಡ್ಡಾಯವಾಗಿ ಈ ಯೋಜನೆಯಡಿಯಲ್ಲಿ ಒಳಪಡಿಸಲಾಗುವುದು. ತದನಂತರ ಬೆಳೆ ಸಾಲ ಪಡೆದ ರೈತರು ಈ ಯೋಜನೆಯಲ್ಲಿ ಭಾಗವಹಿಸಲು ಇಚ್ಛೆ ಪಡದೇ ಇದ್ದಲ್ಲಿ, ಈ ಕುರಿತು ಬ್ಯಾಂಕಿನ ವ್ಯವಸ್ಥಾಪಕರಿಗೆ ಬೆಳೆ ನೋಂದಣಿ ಅಂತಿಮ ದಿನಾಂಕಕ್ಕಿಂತ 7 ದಿನಗಳು ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರವನ್ನು ನೀಡಿದಲ್ಲಿ ಅಂತಹ ರೈತರನ್ನು ಬೆಳೆ ವಿಮೆ ಯೋಜನೆಯಿಂದ ಕೈಬಿಡಲಾಗುವುದು. ಆರ್ಥಿಕ ಸಂಸ್ಥೆಗಳು, ಬ್ಯಾಂಕ್, ಸಾರ್ವಜನಿಕ ಸೇವಾ ಕೇಂದ್ರ (Common Service Centers) ಗಳಲ್ಲಿ ರೈತರನ್ನು ಬೆಳೆ ವಿಮೆಗೆ ನೋಂದಾಯಿಸಿದಾಗ ಬೆಳೆ ವಿಮೆ ಪ್ರಸ್ತಾವನೆಯನ್ನು ಹಾಗೂ ವಿಮಾ ಕಂತನ್ನು ನಿಗಧಿತ ಸಮಯದೊಳಗೆ ನಿಯಮಾನುಸಾರ ಅನುಷ್ಠಾನ ವಿಮಾ ಸಂಸ್ಥೆಗಳಿಗೆ ವರ್ಗಾಯಿಸಲು ಕ್ರಮಕ್ಕೈಗೊಳ್ಳತಕ್ಕದ್ದು, ನೋಂದಣಿ ಪ್ರಕ್ರಿಯೆಯ ಹಂತದಲ್ಲಿ ಮೇಲೆ ತಿಳಿಸಿದ ಸಂಸ್ಥೆಗಳ ನಿರ್ಲಕ್ಷದಿಂದ ಯಾವುದೇ ಲೋಪ ದೋಷಗಳು ಉಂಟಾದಲ್ಲಿ ಅದರಿಂಗಾಗುವ ಬೆಳೆ ವಿಮೆ ಪರಿಹಾರ ವ್ಯಾಜ್ಯಗಳಿಗೆ ಸಂಬಂಧಿಸಿದ ಸಂಸ್ಥೆಗಳೆ ನೇರ ಹೊಣೆಗಾರರಾಗಿರುತ್ತಾರೆ. ಆಸಕ್ತ ರೈತರು ತಮ್ಮ ವ್ಯಾಪ್ತಿಯ ಬ್ಯಾಂಕುಗಳಲ್ಲಿ ಹಾಗೂ ಅನುಮೋದಿತ ಸಾರ್ವಜನಿಕ ಸೇವಾ ಕೇಂದ್ರಗಳಲ್ಲೂ ವಿಮೆಗೆ ನೋಂದಣಿ ಮಾಡಬಹುದಾಗಿದೆ. ಚಿತ್ರದುರ್ಗ ಜಿಲ್ಲೆಗೆ Agriculture Insurance Company of India Limited ಅನುಷ್ಠಾನ ಸಂಸ್ಥೆಯಾಗಿರುತ್ತದೆ. ರೈತರು ನೋಂದಾಣಿಗಾಗಿ ಕಡ್ಡಾಯವಾಗಿ FRUITS ID (FID) ಹೊಂದಿರಬೇಕು. ಆಸಕ್ತ ರೈತ ಬಾಂದವರು ನಿಗಧಿತ ದಿನಾಂಕದೊಳಗೆ ಬೆಳೆ ವಿಮೆಗೆ ನೋಂದಾವಣೆ ಮಾಡಲು ವಿನಂತಿಸಿದೆ. ಅಂತಿಮ ಸಮಯದಲ್ಲಿ ಜನದಟ್ಟಣೆಯಿಂದಾಗಿ ನೋಂದಾಣಿಯಲ್ಲಿ ತಪ್ಪುಗಳು ಸಂಭವಿಸಿ, ವಿಮೆ ಪರಿಹಾರ ಬಾರದಿರುವ ಸಂಭವವಿರುತ್ತದೆ. ಇದಕ್ಕೆ ಅವಕಾಶ ಕೊಡದೇ ಸಕಾಲದಲ್ಲಿ ನೋಂದಾವಣೆ ಮಾಡಲು ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಕೋರಿದ್ದಾರೆ.

**ಪ್ರಮುಖ ಸುದ್ದಿ**

**ಕಲುಷಿತ ನೀರಿನಿಂದ ಉಂಟಾದ ಸಮಸ್ಯೆ : ಗ್ರಾಮದಲ್ಲಿ ವೈದ್ಯರ ತಂಡ ಮೊಕ್ಕಾಂ.**

# ಗೋಪನಹಳ್ಳಿ: 20ಕ್ಕೂ ಹೆಚ್ಚು ಜನರು ಆಸ್ಪತ್ರೆಗೆ ದಾಖಲು

» **ಚಳ್ಳಕೆರೆ**

ತಾಲ್ಲೂಕಿನ ಗೋಪನಹಳ್ಳಿ ಗ್ರಾಮದಲ್ಲಿ ಕಲುಷಿತ ನೀರು ಸೇವನೆಯಿಂದ ಗ್ರಾಮದ 20ಕ್ಕೂ ಹೆಚ್ಚು ಜನರು ವಾಂತಿ, ಬೇದಿಯಿಂದ ದಿಢೀರ್ ಅಸ್ವಸ್ಥಗೊಂಡು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ತುರ್ತು ಚಿಕಿತ್ಸೆ ಪಡೆಯುತ್ತಿದ್ದು, ಅವರೆಲ್ಲರೂ ಅಪಾಯದಿಂದ ಪಾರಾಗಿ ದ್ದಾರೆಂದು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಬಿಂದುಶ್ರೀ ತಿಳಿಸಿದ್ದಾರೆ. ಗ್ರಾಮದ ಕುಡಿಯುವ ನೀರಿನ ಪೈಪ್‌ಮೂಲಕ ಬರುತ್ತಿರುವ ನೀರು ಸೇವಿಸಿದ ಗ್ರಾಮಸ್ಥರಿಗೆ ವಾಂತಿ, ಬೇದಿ ಆರಂಭವಾಗಿದ್ದು ಕೂಡಲೇ ಅವರನ್ನು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ಕೊಡಿಸಲಾಗಿದೆ. ಕಳೆದ ಮೇ. 29, 30, 31 ಮೂರು ದಿನಗಳ ಕಾಲವೂ ಗ್ರಾಮದ ಜನರು ವಾಂತಿ, ಬೇದಿಯಿಂದ ಅಸ್ವಸ್ಥಗೊಂಡು ಗಾಬರಿಯಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಜೂನ್ 1ರಂದು ಸಮೀಪದ ರೆಡ್ಡಿಹಳ್ಳಿ ಗ್ರಾಮದಲ್ಲೂ ಸಹ ಗೌರಮ್ಮ(52), ಸಿದ್ದೇಶ್(30), ಮಧು(17) ಇವರು ಸಹ ವಾಂತಿಬೇದಿಯಿಂದ ಅಸ್ವಸ್ಥರಾಗಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ.







ಗ್ರಾಮದಲ್ಲಿ ದಿಢೀರನೇ ವಾಂತಿಬೇದಿ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ವೈದ್ಯರು ಕೂಡಲೇ ಗ್ರಾಮ ಪಂಚಾಯಿತಿ ಆಡಳಿತಕ್ಕೆ ಪತ್ರ ಮುಖೇನ ಮಾಹಿತಿ ನೀಡಿದ್ದು, ಗ್ರಾಮದ ನೀರಿನ ತೊಟ್ಟಿ, ಚರಂಡಿ ಸ್ವಚ್ಛಗೊಳಿಸಿ, ಪೈಪ್‌ಗಳನ್ನು ಸರಿಪಡಿಸಬೇಕೆಂದು ಸೂಚನೆ ನೀಡಿದ್ದಾರೆ. ನೀರಿನ ಮಾದರಿಗಳನ್ನು ಪರೀಕ್ಷೆಗಾಗಿ ಸಂಗ್ರಹಿಸಿ ಕಳಿಸಿಕೊಟ್ಟಿರುವುದಾಗಿ ವೈದ್ಯರು ಮಾಹಿತಿ ನೀಡಿದ್ದಾರೆ. ಗ್ರಾಮದಲ್ಲಿ ದಿಢೀರನೇ ವಾಂತಿ ಬೇದಿ ಪ್ರಕರಣ ಹೆಚ್ಚಾದ ಹಿನ್ನೆಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಹಾಗೂ ತಾಲ್ಲೂಕು ಆರೋಗ್ಯಾಧಿಕಾರಿಗಳ ಮಾರ್ಗದರ್ಶನದಲ್ಲಿಆರೋಗ್ಯಾಧಿಕಾರಿಗಳ ತಂಡ ಗ್ರಾಮದಲ್ಲಿ ಮೊಕ್ಕಾಂ ಹೂಡಿದೆ.

ವಾಂತಿ, ಬೇದಿಯಿಂದ ಜನರು ಗಾಬರಿಗೊಂಡ ಹಿನ್ನೆಲೆಯಲ್ಲಿ ವೈದ್ಯೆ ಡಾ.ಬಿಂದುಶ್ರೀ ಆಸ್ಪತ್ರೆಯಲ್ಲಿ ಮೊಕ್ಕಾಂ ಹೂಡಿದ್ದಾರೆ. ವೈದ್ಯರ ತಂಡ ಮನೆ, ಮನೆಗೂ ಭೇಟಿ ನೀಡಿ ಗ್ರಾಮಸ್ಥರಿಗೆ ಕಾಯಿಸಿ ಆರಿಸಿದ ನೀರನ್ನು ಸೇವಿಸುವಂತೆ ಮನವಿ ಮಾಡಿದ್ದಾರೆ. ಯಾವುದೇ ಕಾರಣಕ್ಕೂ ಯಾರೂ ಸಹ ವಾಂತಿ, ಬೇದಿ ಕಾಣಿಸಿಕೊಂಡಲ್ಲಿ ತಡಮಾಡದೆ ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆಯುವಂತೆ ಸಲಹೆ ನೀಡಿದ್ದಾರೆ. ಈಗಾಗಲೇ ಆಶಾ ಕಾರ್ಯಕರ್ತರ ಸಹಕಾರದಿಂದ ಗ್ರಾಮದ ಮನೆ, ಮನೆಗೂ ತೆರಳಿ ಗ್ರಾಮಸ್ಥರಿಗೆ ಸೂಕ್ತ ಸಲಹೆ ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಮಾಹಿತಿ ನೀಡಲಾಗಿದೆ. ಆಸ್ಪತ್ರೆಯ ಎಲ್ಲಾ ಸಿಬ್ಬಂದಿ ವರ್ಗವೂ ಸ್ಥಳದಲ್ಲೇ ಇದ್ದು ಜನರ ಆರೋಗ್ಯ ಬಗ್ಗೆ ಗಮನಹರಿಸುತ್ತಿದೆ.

**ಫಾಸ್ಟ್ ನ್ಯೂಸ್**

## ವಾಲ್ಮೀಕಿ ನಿಗಮ ಹಗರಣ: ಖಜಾನೆ ಹಗಲು ದರೋಡೆ

» **ಮೊದಲ ಪುಟದಿಂದ**

'ಯಾವುದೇ ಬ್ಯಾಂಕ್ ಅಧಿಕಾರಿ ಹೀಗೆ ಮನಸೋ ಇಚ್ಛೆ ವರ್ಗಾವಣೆ ಮಾಡುವುದಿಲ್ಲ. ಸರ್ಕಾರ ಶಾಮಿಲಾ ಗಿಯೇ ಈ ಕೆಲಸ ಮಾಡಿದೆ. ಯೂನಿಯನ್ ಬ್ಯಾಂಕಿನವರೇ ಕೇಂದ್ರದ ಆರ್ಥಿಕ ಇಲಾಖೆಗೆ ತನಿಖೆಗೆ ಪತ್ರ ಬರೆದ ನಂತರ ತಮ್ಮ ಬುಡಕ್ಕೆ ಬರುತ್ತೆ ಎನ್ನುವ ಕಾರಣಕ್ಕೆ ತನಿಖೆಗೆ ಸಮಿತಿ ರಚಿಸಿದ್ದಾರೆ. ಕೇವಲ ಸಚಿವರ ರಾಜೀನಾಮೆ ಅಲ್ಲ, ಮುಖ್ಯಮಂತ್ರಿಯೇ ರಾಜೀನಾಮೆ ಕೊಡಬೇಕು' ಎಂದು ಆಗ್ರಹಿಸಿ ಇದು ವಾಲ್ಮೀಕಿ ಸಮುದಾಯಕ್ಕೆ ಸೇರಬೇಕಾದ ಹಣ. ಈ ನಿಟ್ಟಿನಲ್ಲಿ ಬಿಜೆಪಿ ಪ್ರತಿ ಹಳ್ಳಿಯಲ್ಲೂ ಜಾಗೃತಿ ಮೂಡಿಸಿ ಹೋರಾಟ ಮಾಡುತ್ತೇವೆ. ಈಗಾಗಲೇ ಮೊಳಕಾಲ್ಮೂರಿನಲ್ಲಿ ದೊಡ್ಡ ಹೋರಾಟ ನಡೆದಿದೆ' ಎಂದರು. ಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಎ. ಮುರುಳಿ, ಪ್ರಧಾನ ಕಾರ್ಯದರ್ಶಿಗಳಾದ ಸುರೇಶ್ ಸಿದ್ದಾಪುರ, ಸಂಪತ್ ಕುಮಾರ್, ಖಜಾಂಚಿ ಮಾಧುರಿ ಗಿರೀಶ್, ಕಲ್ಲೇಶಯ್ಯ ನವೀನ್ ಚಾಲುಕ್ಯ, ವಕ್ತಾರ ನಾಗರಾಜ್ ಬೇದ್ರೇ, ತಿಪ್ಪಸ್ವಾಮಿ ಉಪಸ್ಥಿತರಿದ್ದರು.

## ಕ್ರೀಡಾ ವಿದ್ಯಾರ್ಥಿಗಳಿಂದ ಪ್ರೋತ್ಸಾಹಧನಕ್ಕಾಗಿ ಅರ್ಜಿ

» **ದಾವಣಗೆರೆ**

ಪ್ರಸಕ್ತಸಾಲಿನಪ್ರತಿಭಾವಂತಮಾಧ್ಯಮಿಕ,ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.10,000/–ರಂತೆ ಪ್ರೋತ್ಸಾಹಿತ ಕ್ರೀಡಾ ವಿದ್ಯಾರ್ಥಿ ವೇತನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಕ್ರೀಡಾ ವಿದ್ಯಾರ್ಥಿ ವೇತನಕ್ಕಾಗಿ ಅರ್ಹ ಕ್ರೀಡಾಪಟುಗಳಿಂದ ಕಚೇರಿಯ ಅಧಿಕೃತ ಜಾಲತಾಣ :https://sevasindhuservices.karnataka.gov.in ಮೂಲಕ ಆನ್‌ಲೈನ್‌ನಲ್ಲಿ ಜೂನ್ 30 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08192–237480 ಸಂಪರ್ಕಿಸಬಹುದು.

## ವಸತಿ ಶಾಲೆ, ಕಾಲೇಜುಗಳಲ್ಲಿನ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ದಾವಣಗೆರೆ ಜಿಲ್ಲೆಯ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಹಿಂದುಳಿದ ವರ್ಗಗಳ ವಸತಿ ಶಾಲೆ, ಕಾಲೇಜುಗಳಲ್ಲಿ ಖಾಲಿ ಇರುವ ಅತಿಥಿ ಶಿಕ್ಷಕರು, ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಗಣಿತ ಉಪನ್ಯಾಸಕರ 1 ಹುದ್ದೆ, ವಿದ್ಯಾರ್ಹತೆ–ಎಂ.ಎಸ್ಸಿ(ಗಣಿತ ), ಗಣಕ ವಿಜ್ಞಾನ ಉಪನ್ಯಾಸಕರ 1 ಹುದ್ದೆ, ವಿದ್ಯಾರ್ಹತೆ–ಎಂ.ಎಸ್ಸಿ ಕಂಪ್ಯೂಟರ್ ಸೈನ್ಸ್ ಅಥವಾ ಎಂ.ಸಿ.ಎ, ಬಿ.ಇ, ಕನ್ನಡ ಭಾಷಾ ಶಿಕ್ಷಕರ 12 ಹುದ್ದೆ, ಆಂಗ್ಲ ಭಾಷಾ ಶಿಕ್ಷಕರ 6 ಹುದ್ದೆ, ಹಿಂದಿ ಭಾಷಾ ಶಿಕ್ಷಕರ 4 ಹುದ್ದೆ, ಗಣಿತ ಶಿಕ್ಷಕರ 3 ಹುದ್ದೆ, ವಿಜ್ಞಾನ ಶಿಕ್ಷಕರ 6 ಹುದ್ದೆ, ಸಮಾಜ ವಿಜ್ಞಾನ ಶಿಕ್ಷಕರ 4 ಹುದ್ದೆಗಳಿವೆ. ಇವರ ವಿದ್ಯಾರ್ಹತೆ–ಪದವಿ ಮತ್ತು ಬಿ.ಇಡಿ(ಟಿ.ಇ.ಟಿ ಉತ್ತೀರ್ಣರಾದವರಿಗೆ ಮೊದಲ ಆದ್ಯತೆ), ಗಣಕ ವಿಜ್ಞಾನ ಶಿಕ್ಷಕರ 6 ಹುದ್ದೆ, ವಿದ್ಯಾರ್ಹತೆ–ಪದವಿ ಬಿಎಸ್ಸಿ, ಬಿಸಿಎ, ಬಿ.ಇ, ದೈಹಿಕ ಶಿಕ್ಷಣ ಶಿಕ್ಷಕರ 4 ಹುದ್ದೆ, ವಿದ್ಯಾರ್ಹತೆ–ಪದವಿ ಮತ್ತು ಬಿ.ಪಿ.ಇಡಿ ಯನ್ನು ಹೊಂದಿರಬೇಕು. ಆಸಕ್ತ ಅಭ್ಯರ್ಥಿಗಳು ಸ್ವವಿವರದೊಂದಿಗೆ ಅಗತ್ಯ ದಾಖಲೆಗಳ ದೃಢೀಕರಿಸಿದ ಪ್ರತಿಗಳನ್ನು ಜೂನ್ 4 ರೊಳಗಾಗಿ ಜಂಟಿ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾಡಳಿತ ಭವನ, ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕು ಎಂದುಜಂಟಿ ನಿರ್ದೇಶಕ .ನಾಗರಾಜ ತಿಳಿಸಿದ್ದಾರೆ.

## ಜೂನ್ 1 ರಿಂದ 4 ರವರೆಗೆ ನಿಷೇಧಾಜ್ಞೆ ಜಾರಿ

» **ದಾವಣಗೆರೆ**

ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರ ಮತ್ತು ನೈರುತ್ಯ ಪದವೀಧರರ ಕ್ಷೇತ್ರ, ನೈರುತ್ಯ ಶಿಕ್ಷಕರ ಕ್ಷೇತ್ರಗಳಿಂದ ವಿಧಾನ ಪರಿಷತ್‌ಗೆ ಜೂನ್ 3 ರಂದು ಮತದಾನ ನಡೆಯುತ್ತಿದ್ದು ದಾವಣಗೆರೆ ಜಿಲ್ಲೆಯಾದ್ಯಂತ ಜೂನ್ 1 ರ ಸಂಜೆ 4 ಗಂಟೆಯಿಂದ ಜೂನ್ 4 ರ ಸಂಜೆ 6 ಗಂಟೆಯವರೆಗೆ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ವೆಂಕಟೇಶ್.ಎಂ.ವಿ ಆದೇಶಿಸಿರುತ್ತಾರೆ.

ನಿಷೇಧಾಜ್ಞೆ ಅವಧಿಯಲ್ಲಿ ಜೂ.3 ರಂದು ಮತದಾನ ಕೇಂದ್ರಗಳಿಗೆ ಮತಹಾಕಲು ಬರುವ ಮತದಾರರನ್ನು ಹೊರತುಪಡಿಸಿ ಉಳಿದಂತೆ 5 ಜನರ ಮೇಲ್ಪಟ್ಟು ಗುಂಪು ಸೇರುವಂತಿಲ್ಲ, ಮಾರಕಾಸ್ತ್ರ, ವಿನಾಶಕಾರಿ ವಸ್ತುಗಳನ್ನು ಸಾಗಣೆ ಮಾಡಬಾರದು ಹಾಗೂ ಇತರೆ ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುವಂತಿಲ್ಲ. ನಿಷೇದಾಜ್ಞೆಯ ಅವಧಿಯಲ್ಲಿ ಯಾವುದೇ ಸಂಘಟನೆಗಳು, ರಾಜಕೀಯ ಪಕ್ಷಗಳು, ಧಾರ್ಮಿಕ ಪಂಗಡಗಳು ಮೆರವಣಿಗೆ, ಪ್ರತಿಭಟನೆ ನಡೆಸಬಾರದು. ಮತದಾನ ಮುಕ್ತಾಯವಾಗುವ 48 ಗಂಟೆಗಳ ಅವಧಿಯಲ್ಲಿ ಚುನಾವಣಾ ಆಯೋಗದ ನಿರ್ದೇಶನದ ಪ್ರಕಾರ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು, ಬೆಂಬಲಿಗರು ಮನೆ, ಮನೆಗೆ ತೆರಳಿ ಪ್ರಚಾರ ಕೈಗೊಳ್ಳಬಹುದು. ಆದರೆ. ಆ ಸಮಯದಲ್ಲಿ ಯಾವುದೇ ಕಾರಣಕ್ಕೂ ನೀತಿ ಸಂಹಿತೆ ಹಾಗೂ ಪ್ರಜಾಪ್ರಾತಿನಿಧ್ಯ ಅಧಿನಿಯಮ ಮತ್ತು ಎಂಸಿಸಿ ನಿಯಮ, ಷರತ್ತುಗಳನ್ನು ತಪ್ಪದೇ ಪಾಲಿಸಬೇಕು ಎಂದು ಆದೇಶದಲ್ಲಿ ತಿಳಿಸಿದ್ದಾರೆ.

### ಲೋಕಸಭಾ ಚುನಾವಣೆ, ಜೂನ್ 4 ರಂದು ಶಿವಗಂಗೋತ್ರಿಯಲ್ಲಿ ಮತ ಎಣಿಕೆ

# ಮಧ್ಯಾಹ್ನದೊಳಗೆ ಫಲಿತಾಂಶ ಸಾಧ್ಯತೆ; ಡಿಸಿ

» **ದಾವಣಗೆರೆ**



ದಾವಣಗೆರೆ ಲೋಕಸಭಾ ಕ್ಷೇತ್ರದ ಮತ ಎಣಿಕೆಯು ಜೂನ್ 4 ರಂದು ಬೆಳಗ್ಗೆ 6.30 ರಿಂದ ಭದ್ರತಾ ಕೊಠಡಿ ತೆರೆಯುವ ಮೂಲಕ 8 ಗಂಟೆಯಿಂದ ದಾವಣಗೆರೆ ವಿಶ್ವವಿದ್ಯಾನಿಲಯ ಶಿವಗಂಗೋತ್ರಿಯಲ್ಲಿ ಮತ ಎಣಿಕೆ ನಡೆಯಲಿದ್ದು ಚುನಾವಣಾ ಕಣದಲ್ಲಿದ್ದ 30 ಅಭ್ಯರ್ಥಿಗಳ ಫಲಿತಾಂಶ ಮಧ್ಯಾಹ್ನದೊಳಗೆ ಹೊರ ಬೀಳುವ ಸಾಧ್ಯತೆ ಇದೆ ಎಂದು ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ದಾವಣಗೆರೆ ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಹರಪನಹಳ್ಳಿ ಸೇರಿದಂತೆ ದಾವಣಗೆರೆ ಜಿಲ್ಲೆಯ 7 ವಿಧಾನಸಭಾ ಕ್ಷೇತ್ರಗಳು ಸೇರಿ 8 ಕ್ಷೇತ್ರಗಳ ಎಣಿಕೆಯು ಶಿವಗಂಗೋತ್ರಿಯಲ್ಲಿ ನಡೆಯಲಿದೆ. ಪ್ರತಿ ಕ್ಷೇತ್ರದಲ್ಲಿ 14 ಟೇಬಲ್‌ಗಳಲ್ಲಿ ಎಣಿಕೆ ನಡೆಯಲಿದ್ದು ಗರಿಷ್ಠ 19 ಸುತ್ತುಗಳಲ್ಲಿ ಎಣಿಕೆ ನಡೆಯಲಿದೆ. ಪ್ರತಿ ಸುತ್ತಿನಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಎಣಿಕೆ ನಡೆದ ನಂತರ ಮುಂದಿನ ಸುತ್ತು ಎಣಿಕೆ ಆರಂಭಿಸಲಾಗುತ್ತದೆ ಎಂದರು.

ಪ್ರತಿ ಎಣಿಕೆ ಟೇಬಲ್‌ಗಳಲ್ಲಿ ಎಣಿಕೆ ಮೇಲ್ವಿಚಾರಕ, ಒಬ್ಬ ಎಣಿಕೆ ಸಹಾಯಕ, ಒಬ್ಬರು ಮೈಕ್ರೋ ಅಬ್ಸರ್‌ವರ್ ನೇಮಕ ಮಾಡಿದ್ದು ಎಲ್ಲಾ 8 ಕ್ಷೇತ್ರಗಳಿಗೆ 336 ಎಣಿಕೆ ಸಿಬ್ಬಂದಿಗಳನ್ನು ನೇಮಕ ಮಾಡಿ ಎರಡು ಹಂತದ ತರಬೇತಿ ನೀಡಲಾಗಿದೆ.

ಮತ ಎಣಿಕೆ ಮುಕ್ತಾಯದ ನಂತರ ವಿವಿ ಪ್ಯಾಟ್ ಸ್ಲಿಪ್ ಎಣಿಕೆ ನಡೆಯಲಿದ್ದು ಪ್ರತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 5 ಮತಗಟ್ಟೆಗಳಲ್ಲಿ ಲಾಟರಿ ಮೂಲಕ ಆಯ್ಕೆ ಮಾಡಿ ವಿವಿ ಪ್ಯಾಟ್ ಸ್ಲಿಪ್ ಎಣಿಕೆ ಮಾಡಲಾಗುತ್ತದೆ ಎಂದರು.

ಅಂಚೆ ಮತ ಎಣಿಕೆಗೆ ಪ್ರತ್ಯೇಕ ಟೇಬಲ್; 85 ವರ್ಷ ಮೇಲ್ಪಟ್ಟ ಹಾಗೂ ವಿಶೇಷಚೇತನರ, ಅಗತ್ಯ ಸೇವೆಗಳ ಗೈರು ಹಾಜರಿ ಮತದಾರರು, ಚುನಾವಣಾ ಕರ್ತವ್ಯ ನಿರತರು ಸೇರಿದಂತೆ 4918 ಅಂಚೆ ಮತಪತ್ರಗಳು ಸ್ವೀಕೃತವಾಗಿದ್ದು ಅಂಚೆ ಮತಪತ್ರಗಳನ್ನು ಎಣಿಕೆ ಮಾಡಲು 12 ಎಣಿಕೆ ಟೇಬಲ್‌ಗಳನ್ನು ಸ್ಥಾಪನೆ ಮಾಡಲಾಗಿದೆ. ಇದಕ್ಕಾಗಿ ಪ್ರತಿ ಟೇಬಲ್‌ಗೆ ಒಬ್ಬ ಸಹಾಯಕ ಚುನಾವಣಾಧಿಕಾರಿ, ಒಬ್ಬ ಎಣಿಕೆ ಮೇಲ್ವಿಚಾರಕ, ಒಬ್ಬ ಎಣಿಕೆ ಸಹಾಯಕರನ್ನು ನೇಮಕ ಮಾಡಲಾಗಿದೆ.

**565 ಸೇವಾ ಮತದಾರರು;** 565 ಸೇವಾ ಮತದಾರರಿಗೆ ಇ.ಟಿ.ಪಿ.ಬಿ.ಎಂ.ಎಸ್. ತಂತ್ರಾಂಶದ ಮೂಲಕ ಮತಪತ್ರಗಳನ್ನು ಕಳುಹಿಸಲಾಗಿದ್ದು ಮೇ ಅಂತ್ಯದವರೆಗೆ 298 ಮತಗಳು ಸ್ವೀಕೃತವಾಗಿವೆ. ಇವುಗಳನ್ನು ಸ್ವೀಕರಿಸಲು ಎಣಿಕೆ ದಿನ ಬೆಳಗ್ಗೆ 7.59 ಸಮಯದವರೆಗೆ ಸ್ವೀಕೃತವಾಗುವ ಮತಗಳನ್ನು ಎಣಿಕೆ ಮಾಡಲಾಗುತ್ತದೆ. ಇದನ್ನು ಎಣಿಕೆ ಮಾಡಲು 1 ಟೇಬಲ್ ಸ್ಥಾಪನೆ ಮಾಡಿ 4 ಜನ ತಾಂತ್ರಿಕ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ ಎಂದರು.

**ಮತಗಟ್ಟೆಗಳು, ಎಣಿಕೆ ಸುತ್ತುಗಳು;** ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 14 ಎಣಿಕೆ ಟೇಬಲ್‌ಗಳಿರಲಿದ್ದು ಪ್ರತಿ ಸುತ್ತಿಗೂ 14 ಮತಗಟ್ಟೆಗಳ ಎಣಿಕೆ ಕ್ರಮವಾಗಿ ನಡೆಯಲಿದ್ದು ಮತಗಟ್ಟೆಗಳ ಸಂಖ್ಯೆಯನ್ನಾಧರಿಸಿ ಸುತ್ತುಗಳು ನಿಗದಿಯಾಗಲಿದೆ. ಕ್ಷೇತ್ರದಲ್ಲಿ ಒಟ್ಟು 1946 ಮತಗಟ್ಟೆಗಳಿವೆ. ಜಗಳೂರು 263 ಮತಗಟ್ಟೆ 19 ಸುತ್ತು, ಹರಪನಹಳ್ಳಿ 253 ಮತಗಟ್ಟೆ 19 ಸುತ್ತು, ಹರಿಹರ 228 ಮತಗಟ್ಟೆಗಳು 16 ಸುತ್ತು, ದಾವಣಗೆರೆ ಉತ್ತರ 245 ಮತಗಟ್ಟೆಗಳು 18 ಸುತ್ತು, ದಾವಣಗೆರೆ ದಕ್ಷಿಣ 217 ಮತಗಟ್ಟೆಗಳು 16 ಸುತ್ತು, ಮಾಯಕೊಂಡ 240 ಮತಗಟ್ಟೆಗಳು 18 ಸುತ್ತು, ಚನ್ನಗಿರಿ 255 ಮತಗಟ್ಟೆ ಗಳು 19 ಸುತ್ತು, ಹೊನ್ನಾಳಿ 245 ಮತಗಟ್ಟೆಗಳ ಎಣಿಕೆ 18 ಸುತ್ತುಗಳಲ್ಲಿ ನಡೆಯಲಿದೆ. ಚುನಾವಣಾ ಕಣದಲ್ಲಿ 30 ಅಭ್ಯರ್ಥಿಗಳು ಹಾಗೂ ನೋಟಾ ಸೇರಿ 31 ಕ್ರಮಾಂಕಗಳನ್ನು ನೋಡಬೇಕಾಗಿರುವುದರಿಂದ ಎಣಿಕೆ ಮುಕ್ತಾಯದ ಅವಧಿ ಹೆಚ್ಚಳವಾಗಬಹುದು.

**ಶೇ 76.98 ರಷ್ಟು ಮತದಾನ;** ದಾವಣಗೆರೆ ಲೋಕಸಭಾ ಕ್ಷೇತ್ರ ಹರಪನಹಳ್ಳಿ ಸೇರಿದಂತೆ 8 ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 1946 ಮತಗಟ್ಟೆಗಳಿಂದ 851990 ಪುರುಷ, 857117 ಮಹಿಳಾ, 137 ಇತರೆ ಸೇರಿ 1709244 ಮತದಾರರಲ್ಲಿ ಮೇ 7 ರಂದು ನಡೆದ ಮತದಾನದಲ್ಲಿ 667742 ಪುರುಷ, 647964 ಮಹಿಳೆಯರು ಹಾಗೂ 40 ಇತರೆ ಸೇರಿ 1315746 ಮತದಾರರು ಮತಚಲಾಯಿಸಿ ಶೇ 76.98 ರಷ್ಟು ಮತದಾನವಾಗಿರುತ್ತದೆ.

**ಎಣಿಕೆ ಕೇಂದ್ರದಲ್ಲಿ ಮೂರು ಹಂತದ ಭದ್ರತಾ ವ್ಯವಸ್ಥೆ;** ಮತ ಎಣಿಕೆ ಕೇಂದ್ರದ ಸುತ್ತಮುತ್ತ ಮೂರು ಹಂತದಲ್ಲಿ ಭದ್ರತೆಯನ್ನು ಒದಗಿಸಲಾಗಿದ್ದು ಮೊದಲ ಹಂತದಲ್ಲಿ ಕೇಂದ್ರ ಸಶಸ್ತ್ರ ಮೀಸಲು ಪೊಲೀಸ್ ಪಡೆ, ಎರಡನೇ ಹಂತದಲ್ಲಿ ರಾಜ್ಯ ಸಶಸ್ತ್ರ ಮೀಸಲು ಪೊಲೀಸ್ ಪಡೆ ಹಾಗೂ ಮೂರನೇ ಹಂತದಲ್ಲಿ ಸಿವಿಲ್ ಪೊಲೀಸ್ ವ್ಯವಸ್ಥೆಯಿಂದ ಭದ್ರತೆ ಒದಗಿಸಲಾಗಿದೆ. ಅಭ್ಯರ್ಥಿಗಳ ಎಣಿಕೆ ಏಜೆಂಟರು, ಎಣಿಕೆ ಸಿಬ್ಬಂದಿಗಳಿಗೆ ಪ್ರವೇಶಕ್ಕೆ ಗುರುತಿನ ಚೀಟಿ ನೀಡಲಾಗಿದ್ದು ಗುರುತಿನ ಚೀಟಿ ಇಲ್ಲದ ಯಾರಿಗೂ ಒಳಗೆ ಪ್ರವೇಶ ಇರುವುದಿಲ್ಲ.

**ಮೊಬೈಲ್ ನಿಷೇಧ;** ಎಣಿಕೆ ಕೇಂದ್ರದೊಳಗೆ ಅನುಮತಿಸಿದ ಅಧಿಕಾರಿಗಳನ್ನು ಹೊರತುಪಡಿಸಿ ಇತರೆ ಯಾರಿಗೂ ಎಣಿಕೆ ಕೇಂದ್ರದೊಳಗೆ ಮೊಬೈಲ್ ಫೋನ್ ತರಲು ಅವಕಾಶ ಇರುವುದಿಲ್ಲ. ಮತ್ತು ಎಣಿಕೆ ಕೇಂದ್ರದೊಳಗೆ ಸ್ಮಾರ್ಟ್ ವಾಚ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ಸ್ ವಸ್ತುಗಳನ್ನು ತೆಗೆದುಕೊಂಡು ಹೋಗುವಂತಿಲ್ಲ. ಮತ್ತು ಆಯುಧ, ಬೆಂಕಿಪಟ್ಟಣ, ಲೈಟರ್, ನೀರಿನ ಬಾಟಲಿಗಳನ್ನು ತೆಗೆದುಕೊಂಡು ಹೋಗುವಂತಿಲ್ಲ. ಮೂರು ಹಂತದಲ್ಲಿ ಚೆಕ್ ಮಾಡುವ ಮೂಲಕ ಏಜೆಂಟರು ಹಾಗೂ ಇತರೆ ಸಿಬ್ಬಂದಿಗಳನ್ನು ಒಳಬಿಡಲಾಗುತ್ತದೆ. ಅಭ್ಯರ್ಥಿಗಳ ಎಣಿಕೆ ಏಜೆಂಟರಾಗಿ ಆಗಮಿಸುವವರಿಗೆ ಪಾವತಿ ಆಧಾರದ ಮೇಲೆ ಉಪಹಾರ, ಶುದ್ದ ಕುಡಿಯುವ ನೀರು, ಲಸ್ಸಿ, ಮಜ್ಜಿಗೆ ವ್ಯವಸ್ಥೆಯನ್ನು ಮಾಡಲಾಗಿದ್ದು ಅವರಿಗೆ ಎಷ್ಟು ಅಗತ್ಯವಿದೆ ಅಷ್ಟು ಕೂಪನ್‌ಗಳನ್ನು ಪಡೆಯಬಹುದಾಗಿದೆ ಎಂದರು.

ಸಾರ್ವಜನಿಕರಿಗೆ ಫಲಿತಾಂಶ ವಿವರ ಲಭ್ಯ; ಪ್ರತಿ ಸುತ್ತಿನ ಎಣಿಕೆ ನಂತರ ಸಾರ್ವಜನಿಕವಾಗಿ ಧ್ವನಿವರ್ಧಕದ ಮೂಲಕ ಸಾರ್ವಜನಿಕರಿಗೆ ಎಣಿಕೆ ವಿವರವನ್ನು ಪ್ರಚಾರ ಮಾಡಲಾಗುತ್ತದೆ. ಸಾರ್ವಜನಿಕರು ಸೇರಿದಂತೆ ಪಕ್ಷಗಳ ಕಾರ್ಯಕರ್ತರು ತಾಳ್ಮೆಯನ್ನು ವಹಿಸುವ ಮೂಲಕ ಸಹಕಾರ ನೀಡಬೇಕೆಂದರು.

**ನಿಷೇಧಾಜ್ಞೆ ಜಾರಿ;** ಸಾರ್ವಜನಿಕ ಶಾಂತಿ, ಕಾನೂನು ಸುವ್ಯವಸ್ಥೆ ಕಾಪಾಡಲು ಜಿಲ್ಲೆಯಾದ್ಯಂತ 144 ಸೆಕ್ಷನ್ ಜಾರಿಗೊಳಿಸಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಅಕ್ರಮ ಗುಂಪು ಸೇರುವಂತಿಲ್ಲ, ಮೆರವಣಿಗೆ ಮಾಡುವಂತಿಲ್ಲ, ಪಟಾಕಿ ಸಿಡಿಸುವುದು, ವಿಜಯೋತ್ಸವ ಆಚರಣೆ ಮಾಡುವಂತಿಲ್ಲ ಎಂದರು.

**ಮದ್ಯ ಮಾರಾಟ ನಿಷೇಧ;** ಮತ ಎಣಿಕೆ ದಿನ ಕಾನೂನು ಸುವ್ಯವಸ್ಥೆ ಕಾಪಾಡಲು ಜೂನ್ 4 ರಂದು ಮದ್ಯ ಮಾರಾಟ ನಿಷೇಧ ಮಾಡಲಾಗಿದೆ.

**ಬಿಗಿ ಬಂದೋಬಸ್ತ್;** ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಮಾತನಾಡಿ ಎಣಿಕೆ ದಿನ ಕೇಂದ್ರದ ಸುತ್ತಮುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಎಣಿಕೆ ಕೇಂದ್ರದೊಳಗೆ ಹೋಗಲು ಮೂರು ಹಂತದತಪಾಸಣೆಗೆಒಳಗಾಗಬೇಕಾಗುತ್ತದೆ. ಎಲ್ಲಾ ಕಡೆ ಬ್ಯಾರಿಕೇಡಿಂಗ್ ವ್ಯವಸ್ಥೆ ಇದ್ದು ಏಜೆಂಟರು, ಸಾರ್ವಜನಿಕರಿಗೆ ಪ್ರತ್ಯೇಕ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಕೇಂದ್ರದೊಳಗೆ ಪ್ರವೇಶ ಮಾಡುವವರಿಗೆ ಅನುಮತಿಸಲಾದ ಗುರುತಿನ ಚೀಟಿಯ ಪ್ರದರ್ಶನ ಮಾಡಿ ಒಳಗೆ ಹೋಗಬೇಕು, ಪ್ರವೇಶಪತ್ರ ಇಲ್ಲದವರಿಗೆ ಎಣಿಕೆ ಕೇಂದ್ರದೊಳಗೆ ಪ್ರವೇಶ ಇರುವುದಿಲ್ಲ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ಮಾತನಾಡಿ 2019 ರ ಲೋಕಸಭಾ ಚುನಾವಣಾ ಮತದಾನಕ್ಕಿಂತ 2024 ರಲ್ಲಿ ಶೇ 4 ರಷ್ಟು ಮತದಾನ ಹೆಚ್ಚಳವಾಗಿದೆ. ಮತದಾನ ಪ್ರಮಾಣ ಹೆಚ್ಚಳಕ್ಕಾಗಿ ಸ್ವೀಪ್ ಸಮಿತಿಯಿಂದ ಅನೇಕ ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಲಾಗಿತ್ತು. ಮತದಾನ ಪ್ರಮಾಣ ಹೆಚ್ಚಳಕ್ಕೆ ಶ್ರಮಿಸಿದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಅಭಿನಂದಿಸಿದರು.

ಈ ವೇಳೆ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ ಉಪಸ್ಥಿತರಿದ್ದರು.

# ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಡಿಸಿ ಕಚೇರಿ ಎದುರು ಸಿಐಟಿಯುನಿಂದ ಪ್ರತಿಭಟನೆ

» **ಚಿತ್ರದುರ್ಗ**




ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಸೌಲಭ್ಯಗಳನ್ನು ಪಡೆಯಲು ಅರ್ಜಿ ಸ್ವೀಕರಿಸುವುದಕ್ಕೆ ವಿಳಂಭ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಷನ್ ಜಿಲ್ಲಾ ಸಮಿತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಶನಿವಾರ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ಕಾರ್ಮಿಕ ಸಚಿವರಿಗೆ ಮನವಿ ಸಲ್ಲಿಸಲಾಯಿತು.

ಸೌಲಭ್ಯಗಳನ್ನುಪಡೆಯಲುಕೂಡಲೆಆನ್‌ಲೈನ್ ಮೂಲಕ ಅರ್ಜಿಗಳನ್ನು ಸ್ವೀಕರಿಸಬೇಕು. ಮೇ.30 ಕ್ಕೆ ಮುಕ್ತಾಯಗೊಂಡಿರುವ ಕಾರ್ಮಿಕ ಮಕ್ಕಳ ಶೈಕ್ಷಣಿಕ ಅರ್ಜಿಗಳ ಸ್ವೀಕಾರವನ್ನು ಆ.31 ರತನಕ ವಿಸ್ತರಿಸಬೇಕು. 2023 ರ ಅಧಿಸೂಚನೆಯನ್ನು ರದ್ದುಪಡಿಸಿ 2021 ರ ಅಧಿಸೂಚನೆ ಅನ್ವಯ ಶೈಕ್ಷಣಿಕ ಧನ ಸಹಾಯ ನೀಡಬೇಕು.

ಹೊಸದಾಗಿ ಅರ್ಜಿ ಸಲ್ಲಿಸುವುದು ಹಾಗೂ ನವೀಕರಣಕ್ಕೆ ಸಂಬಂಧಿಸಿದಂತೆ ಉಂಟಾಗುತ್ತಿರುವ ತಾಂತ್ರಿಕ ಸಮಸ್ಯೆಯನ್ನು ಬಗೆಹರಿಸಬೇಕು.

ಕರ್ನಾಟಕ ಹೈಕೋರ್ಟ್‌ನ ಮಧ್ಯಂತರ ಆದೇಶದನ್ವಯ ಅಮೃತ ಹಾಗೂ ಅಕ್ಷತ ಎನ್ನುವ ವಿದ್ಯಾರ್ಥಿನಿಯರಿಗೆ ದಂಡ ಸಹಿತ ಶೈಕ್ಷಣಿಕ ಧನ ಸಹಾಯ ಪಾವತಿಸಬೇಕು.

ಎಲ್ಲಾ ರೀತಿಯ ಖರೀಧಿಗಳನ್ನು ನಿಲ್ಲಿಸಿ ಜಾರಿಯಲ್ಲಿರುವ ಸೌಲಭ್ಯಗಳ ಧನ ಸಹಾಯವನ್ನು ನೇರ ವರ್ಗಾವಣೆ ಮೂಲಕ ಪಾವತಿಸಬೇಕೆಂದು ಪ್ರತಿಭಟನಾನಿರತರು ಒತ್ತಾಯಿಸಿದರು.

ಸಿಐಟಿಯು. ಜಿಲ್ಲಾ ಸಹ ಸಂಚಾಲಕ ಸಿ.ಕೆ.ಗೌಸ್‌ಪೀರ್, ಬಿ.ಕೆ.ನಾಗರಾಜಚಾರಿ, ಮಂಜುನಾಥ, ಮಹಮದ್ ಜಿಕ್ರಿಯಾವುಲ್ಲಾ, ರಾಘವೇಂದ್ರ, ಅಬ್ದುಲ್ಲಾ, ರಶೀದ್, ಉಮೇಶ್, ಶೇಖ್‌ಕಲೀಂವುಲ್ಲಾ, ಕೆ.ಎನ್.ನಾಗರಾಜ್, ಸೈಯದ್ ಮುಜ್ಜು ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



ಕವಾಡಿಗರಹಟ್ಟಿಯಲ್ಲಿರುವ ರಾಜಕಾಲುವೆಯನ್ನು ನಗರಸಭೆಯಿಂದ ಜೆಸಿಬಿ. ಮೂಲಕ ಸ್ವಚ್ಛಗೊಳಿಸಲಾಯಿತು.

## ಅವಧಿ ವಿಸ್ತರಣೆ

**ದಾವಣಗೆರೆ:** ಶೈಕ್ಷಣಿಕ ಸಾಲಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ದಾವಣಗೆರೆ ಇಲ್ಲಿ ಆನ್‌ಲೈನ್ ಪ್ರವೇಶ ಪಡೆಯುವ ದಿನಾಂಕವನ್ನು ಜೂನ್ 9 ರವರೆಗೆ ವಿಸ್ತರಣೆ ಮಾಡಲಾಗಿದೆ ಎಂದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಬಾಲ್ಯ ವಿವಾಹ ತಡೆಗಟ್ಟುವುದು ಕಾರ್ಯಕರ್ತೆಯರ ಕೆಲಸವಲ್ಲ

» **ಹೊಸದುರ್ಗ**



ಬಾಲ್ಯವಿವಾಹತಡೆಗಟ್ಟುವುದುಅಂಗನವಾಡಿ ಕಾರ್ಯಕರ್ತೆಯರ ಕೆಲಸವಲ್ಲ ಅದು ಶಿಶು ಅಭಿವೃದ್ಧಿ ಯೋಜನೆಯ ಅಧಿಕಾರಿ ಹಾಗೂ ಇಲಾಖೆಯ ಮೇಲ್ವಿಚಾರಕರ ಕೆಲಸ ಎಂದು ಕಮ್ಯುನಿಷ್ಠ ಪಕ್ಷದ ಜಿಲ್ಲಾ ಕಾರ್ಯದರ್ಶಿ ಕಾಂಮ್ರೆಡ್ ಸುರೇಶ್ ಬಾಬು ಹೇಳಿದರು.

ಪಟ್ಟಣದ ಶ್ರೀ ಗುರು ಒಪ್ಪತ್ತಿನಸ್ವಾಮಿ ವಿರಕ್ತ ಮಠದಲ್ಲಿ ಆಯೋಜಿಸಲಾಗಿದ್ದ 35ನೇ ಕಾರ್ಮಿಕರದಿನಾಚರಣೆಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಚಿಕ್ಕ ಮಕ್ಕಳ ಮದುವೆ ಮಾಡುವವರು ನಿಮಗೆ ಹೇಳಿ ಮಾಡುತ್ತಾರೆ . ಅಧಿಕಾರಿಗಳು ಇವುಗಳನ್ನು ಗಮನಿಸಬೇಕು ಬಾಲ್ಯ ವಿವಾಹ ನಡೆದಾಗ ಅಂಗನವಾಡಿ ಕಾರ್ಯಕರ್ತೆಯರನ್ನು ಹೊಣೆಯನ್ನಾಗಿ ಮಾಡುವುದು ಸರಿಯಲ್ಲ ಅದು ನಿಮ್ಮಗಳ ಕೆಲಸವಲ್ಲ . ಬಾಲ್ಯ ವಿವಾಹ ಪತ್ತೆ ಹಚ್ಚಲು ನಿಮಗೆ ಹೇಳಿದರೆ ಅದನ್ನು ಪ್ರತಿಭಟಿಸಿ ಎಂದು ಕರೆ ನೀಡಿದರು.

ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರ ಬದಲಾದರೆ ಮಾತ್ರ ಅಂಗನವಾಡಿ ಕಾರ್ಯಕರ್ತೆಯರಿಗೆ ಉಳಿಗಾಲ ಇಲ್ಲದಿದ್ದರೆ ಬಹಳಕಷ್ಟವಿದೆ . ಕೇಂದ್ರ ಸರ್ಕಾರದಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗಾಗಿ ಇದ್ದ 23 ಸಾವಿರ ಕೋಟಿ ಅನುದಾನಲ್ಲಿ ಮೋದಿ ಸರ್ಕಾರ 10ಸಾವಿರ ಕೋಟಿಯನ್ನು ಕಡಿತಮಾಡಿದೆ. ಕೇಂದ್ರದಿಂದ ನಿಮಗೆ ಬರುತ್ತಿರುವುದು ಕೇವಲ 3 ಸಾವಿರ ಮಾತ್ರ ಉಳಿದಿದ್ದು ರಾಜ್ಯ ಸರ್ಕಾರ ಕೊಡುತ್ತಿದೆ ಎಂದರು.

ಮೋದಿಜಿ ಮಹಾತ್ಮ ಹೇಳುವುದೊಂದು ಮಾಡುವುದೊಂದು . ಮುಂದಿನ ರಾಜ್ಯ ಸಮಿತಿ ಸದಸ್ಯ ಕಾಂಮ್ರೆಡ್ ಶಿವರುದ್ರಪ್ಪ ಮಾತನಾಡಿ ಕಳೆದ ವಿಧಾನಸಭಾ ಚುನಾವಣೆ ವೇಳೆ ಕಾಂಗ್ರೆಸ್ ಪಕ್ಷ ತಮ್ಮ ಪ್ರಣಾಳಿಕೆಯಲ್ಲಿ ರಾಜ್ಯದಲ್ಲಿ ಪಕ್ಷ ಅಧಿಕಾರಕ್ಕೆ ಬಂದರೆ ಅಂಗನವಾಡಿ ಕಾರ್ಯಕರ್ತೆರಿಗೆ 18 ಸಾವಿರ ಅಕ್ಷರದಾಸೋಹದ ಬಿಸಿಯೂಟ ಕಾರ್ಯಕರ್ತೆಯರಿಗೆ 10 ಸಾವಿರ, ಆಶಾ ಕಾರ್ಯಕರ್ತೆಯರಿಗೆ 8 ಸಾವಿರ ಕೊಡುತ್ತೇವೆ ಎಂದು ಹೇಳಲಾಗಿತ್ತು ಆದರೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷ ಕಳೆದರೂ ಈವರೆವಿಗೂ ಈಡೇರಿಸಿಲ್ಲ ಎಂಬ ಅಸಮಾಧನ ವ್ಯಕ್ತಪಡಿಸಿದರು.

ಎಐಯುಟಿಸಿ ತಾಲೂಕು ಅಧ್ಯಕ್ಷ ಕುಮಾರಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಮೊಳಕಾಲ್ಮೂರು ಅಧ್ಯಕ್ಷ ಜಾಫರ್ ಷರೀಫ್, ತಿರುಂಪುರ ರಾಜಣ್ಣ, ಅಂಗನವಾಡಿ ಕಾರ್ಯಕರ್ತೆಯರ ಫೇಡರೇಷನ್ನಿನ ತಾಲೂಕು ಅಧ್ಯಕ್ಷೆ ಸುಮಿತ್ರಾ ಬಾಯಿ, ಕಾರ್ಯದರ್ಶಿ ಗೀತಾಂಜಲಿ, ಸೌಭಾಗ್ಯ, ರೂಪ ಸೇರಿದಂತೆ ತಾಲೂಕಿನ ಎಲ್ಲಾ ವೃತ್ತದ ಪದಾಧಿಕಾರಿಗಳು ಹಾಜರಿದ್ದರು.

**ಫಾಸ್ಟ್ ನ್ಯೂಸ್**

## ನಿರ್ಮಾಣ ಹಂತದ ಕಟ್ಟಡದಿಂದ ಕೆಳಗೆ ಬಿದ್ದ ಕೂಲಿಕಾರ್ಮಿಕ ಸಾವು

» **ಚಳ್ಳಕೆರೆ**



ನಗರದ ಬೆಂಗಳೂರು ರಸ್ತೆಯ ಜಯಲಕ್ಷ್ಮಿ ಬಡಾವಣೆಯಲ್ಲಿ ನಿರ್ಮಾಣ ಹಂತದ ಕಟ್ಟಡದಿಂದ ಕೆಳಗೆ ಬಿದ್ದ ಕೂಲಿಕಾರ್ಮಿಕ ಸಾವು ಘಟನೆ ನಡೆದಿದೆ. ಕೂಲಿ ಕೆಲಸ ಮಾಡುತ್ತಿದ್ದ ಶ್ರೀಧರ(33) ಎಂಬ ಕೂಲಿಕಾರ್ಮಿಕ ಆಕಸ್ಮಿಕವಾಗಿ ಕೆಳಗೆ ಬಿದ್ದು ತೀರ್ವರಕ್ತಸ್ರಾವದಿಂದ ನರಳಾಡುತ್ತಿದ್ದು ಸಾರ್ವಜನಿಕ ಆಸ್ಪತ್ರೆಗೆ ದಾಖಲು ಮಾಡಿ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸುವ ಸಂದರ್ಭದಲ್ಲಿ ಮಾರ್ಗಮಧ್ಯ ಮೃತಪಟ್ಟಿರುತ್ತಾನೆ. ಪತ್ನಿ, ಇಬ್ಬರು ಮಕ್ಕಳು ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾನೆ.

## ಮಳೆಯಲ್ಲಿ ನೆಂದುಹೋಗಿದ್ದ ಮೇಲ್ಚಾವಣಿ ಕುಸಿತ: 50 ಸಾವಿರಕ್ಕೂ ಹೆಚ್ಚು ನಷ್ಟ



» **ಚಳ್ಳಕೆರೆ**

ಕಳೆದ ಮೇ.ತಿಂಗಳ ಅಂತ್ಯದಲ್ಲಿ ತಾಲ್ಲೂಕಿನಾದ್ಯಂತ ಉತ್ತಮ ಮಳೆಯಾಗಿದ್ದು, ನೆನೆ ಮಳೆಗೆ ನೆಂದು ಹೋಗಿದ್ದ ಮನೆಯ ಮೇಲ್ಚಾವಣಿಗಳು ಭಾರದಿಂದ ಕುಸಿದುಬೀಳಲು ಆರಂಬಿಸಿವೆ. ತಾಲ್ಲೂಕಿನ ಕರೀಕೆರೆ ಗ್ರಾಮದ ಶಾಂತಮ್ಮ ಎಂಬುವವರ ಮನೆಯ ಮೇಲ್ಚಾವಣಿ ಕುಸಿದು ಬಿದ್ದು ಸುಮಾರು 50 ಸಾವಿರ ನಷ್ಟ ಸಂಭವಿಸಿದೆ. ತಾಲ್ಲೂಕಿನ ತಳಕು ಹೋಬಳಿಯ ದೊಡ್ಡ ಉಳ್ಳಾರ್ತಿ ಗ್ರಾಮದಲ್ಲಿ ಸಿಡಿಲು ಬಡಿದು ಕರೆಂಟ್ ಶಾರ್ಟ್‌ಸರ್ಕ್ಯೂಟ್ ಆಗಿ ಅಂಗಡಿಯೊಂದಕ್ಕೆ ಬೆಂಕಿ ಹೊತ್ತಿಕೊಂಡ ಪರಿಣಾಮ ಅಂಗಡಿಯಲ್ಲಿದ್ದ ಎಲ್ಲಾ ವಸ್ತುಗಳು ಸುಟ್ಟು ಕರಕಲಾಗಿದ್ದು, ಇವರಿಗೂ ಸಹ ಹೆಚ್ಚಿನ ನಷ್ಟ ಸಂಭವಿಸಿದೆ.

### ಡಿ.ಉಪ್ಪಾರಹಟ್ಟಿ : ತಂಬಾಕು ವಿರೋಧಿ ದಿನಸ ಕಾರ್ಯಕ್ರಮ

# ಧೂಮ, ಮದ್ಯಪಾನ ಜೀವನಕ್ಕೆ ಕಂಟಕಪ್ರಾಯ

» **ಚಳ್ಳಕೆರೆ**

ಪ್ರತಿಯೊಬ್ಬರು ಜೀವನದಲ್ಲಿ ಒಳ್ಳೆಯ ಮೌಲ್ಯ ಅಳವಡಿಸಿಕೊಂಡರೆ ಮಾತ್ರ ನೆಮ್ಮದಿಯಿಂದ ಬದುಕಲು ಸಾಧ್ಯವಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಬಗ್ಗೆ ಹೆಚ್ಚು ಗಮನಹರಿಸಬೇಕಾಗಿದೆ. ತಂಬಾಕು ಸೇರಿದಂತೆ ಹಲವಾರು ಮಾದಕ ವಸ್ತುಗಳ ಸೇವನೆಯಿಂದ ಸ್ವಯಂಪ್ರೇರಣೆಯಿಂದ ನಾವೇ ಅಪಾಯಕ್ಕೆ ಸಿಲುಕಿಕೊಳ್ಳುತ್ತೇವೆ. ಈ ಬಗ್ಗೆ ಜಾಗೃತಿ ಅಗತ್ಯವೆಂದು ಉಪನ್ಯಾಸಕಿ ಬಿ.ರೂಪ ತಿಳಿಸಿದರು.

ಅವರು, ಗಾಂಧಿನಗರ ವಲಯದ ಡಿ.ಉಪ್ಪಾರಹಟ್ಟಿ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿ ಹಮ್ಮಿಕೊಂಡಿದ್ದ ವಿಶ್ವತಂಬಾಕು ವಿರೋಧಿ ದಿವಸ್ ಕಾರ್ಯಕ್ರಮಕ್ಕೆ ಜ್ಯೋತಿ ಬೆಳಗುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಹದಿಹರೆಯದ ವಯಸ್ಸಿನಲ್ಲೇ ಮಾದಕ ವೆಸನಿಗಳಾಗಿ ರೂಪಗೊಂಡರೆ ಸಮಾಜದಲ್ಲಿ ತಲೆತಗ್ಗಿಸಬೇಕಾಗುತ್ತದೆ.



ನಮ್ಮ ದೇಶದ ಸಂಸ್ಕೃತಿ ಸಂಸ್ಕಾರದಿಂದ ಕೂಡಿದೆ. ಆದ್ದರಿಂದ ನಾವೆಲ್ಲರೂ ಇಂತಹ ದುಶ್ಚಟಗಳು ನಮ್ಮತ್ತ ಸುಳಿಯದಂತೆ ಜಾಗ್ರತೆ ವಹಿಸಬೇಕು ಎಂದರು.

ವಲಯಮೇಲ್ವಿಚಾರಕ ಸಂತೋಷ್ ಪ್ರಾಸ್ತವಿಕವಾಗಿ ಮಾತನಾಡಿ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಗ್ರಾಮೀಣ ಭಾಗದ ಜನರ ಪಾಲಿಗೆ ಜನಪರ ಯೋಜನೆ ರೂಪಿಸಿದೆ. ಧಾರ್ಮಿಕ ಕ್ಷೇತ್ರವೂ ಸೇರಿದಂತೆ ಸಾಮಾಜಿಕ ಸೇವಾ ಚಟುವಟಿಕೆಗಳಲ್ಲೂ ಸಹ ಗ್ರಾಮಾಭಿವೃದ್ಧಿ ಯೋಜನೆ ಕಾರ್ಯ ಶ್ಲಾಘನೀಯ.

ಗ್ರಾಮಾಭಿವೃದ್ಧಿ ಯೋಜನೆಯಿಂದ ಪ್ರತಿವರ್ಷ ಕುಡಿತವನ್ನು ತ್ಯಜಿಸುವಂತೆ ಜಾಗೃತಿಮೂಡಿಸಲು ಶಿಬಿರಗಳನ್ನು ನಡೆಸಲಾಗುತ್ತಿದೆ.

ದುಶ್ಚಟಕ್ಕೆ ಬಲಿಯಾಗುವವರು ಸ್ವಯಂ ಪ್ರೇರಣೆಯಿಂದ ಸಮಾಜಮುಖಿ ಸೇವಾಚಟುವಟಿಕೆಗಳಲ್ಲಿ ಭಾಗವಹಿಸುವಂತಾಗಬೇಕು, ಇದರಿಂದ ಸಮಾಜಕ್ಕೆ ಹೆಚ್ಚು ಅನುಕೂಲವಾಗಲಿದೆ.

ಇಂದಿನ ಯುವ ಪೀಳಿಗೆ ಧೂಮಪಾನ, ಮದ್ಯಪಾನ, ಗುಟ್ಕಾಸೇವನೆ ಮುಂತಾದ ದುಶ್ಚಟಗಳನ್ನು ದೂರವಿಡಬೇಕು ಎಂದರು. ಮುಖ್ಯ ಶಿಕ್ಷಕಿ ಚಾರುಲತಾ, ಜ್ಞಾನವಿಕಾಸ ಸಮನ್ವಯಾಧಿಕಾರಿ ಭವಾನಿಇಂದಿರಾ ಮುಂತಾದವರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸುವ ಶಿಕ್ಷಕರ ಕಾರ್ಯಕ್ಕೆ ಎಲ್ಲೆಡೆ ಮನ್ನಣೆ: ತಿಪ್ಪೇಸ್ವಾಮಿ

» **ಚಳ್ಳಕೆರೆ**

ದೇಶದ ಮತ್ತು ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಶಿಕ್ಷಣವೇ ಮೂಲತಳಹದಿ. ಎಲ್ಲಿ ಶಿಕ್ಷಣಕ್ಕೆ ಮೊದಲ ಪ್ರಾಶಸ್ತ್ಯವಿರುತ್ತದೆಯೋ ಅಲ್ಲಿ ಶೈಕ್ಷಣಿಕ, ಆರ್ಥಿಕ, ಸಾಮಾಜಿಕ ಹಾಗೂ ಇನ್ನಿತರೆ ಎಲ್ಲಾ ಅಭಿವೃದ್ಧಿ ಕಾರ್ಯವನ್ನು ಕಾಣಬಹುದು. ಮಕ್ಕಳ ಶೈಕ್ಷಣಿಕ ಬದುಕನ್ನು ರೂಪಿಸುವ ಶಿಕ್ಷಕ ಹುದ್ದೆಗೆ ವಿಶೇಷ ಮೌಲ್ಯವಿದ್ದು ಅಂತಹ ಮೌಲ್ಯವನ್ನು ತಂದುಕೊಟ್ಟ ಕೆಲವೇ ಮುಖ್ಯ ಶಿಕ್ಷಕರಲ್ಲಿ ಇಂದು ನಿವೃತ್ತಿ ಹೊಂದುತ್ತಿರುವ ಮುಖ್ಯ ಶಿಕ್ಷಕ ಭೀಮಾರೆಡ್ಡಿ ಮೊದಲಿಗರು ಎಂದು ತಾಲ್ಲೂಕುಅಕ್ಷರದಾಸೋಹಾಧಿಕಾರಿ ತಿಪ್ಪೇಸ್ವಾಮಿ ತಿಳಿಸಿದರು.

ಅವರು, ತಾಲ್ಲೂಕಿನ ತಳಕು ಹೋಬಳಿಯ ಬಂಜಿಗೆರೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಸೇವೆಯಿಂದ ನಿವೃತ್ತಿ ಹೊಂದಿದಮುಖ್ಯಶಿಕ್ಷಕಭೀಮಾರೆಡ್ಡಿ ದಂಪತಿಗಳನ್ನುಸನ್ಮಾನಿಸಿಬೀಳ್ಕೊಟ್ಟು ಮಾತನಾಡಿದರು. ಬಂಜಿಗೆರೆ ಶಾಲೆ ಇಂದು ಸಸ್ಯರಾಶಿಯಿಂದ ತುಂಬಿದೆ. ಇಡೀ ಶಾಲೆಯ ವಾತಾವರಣವೇ ಉಲ್ಲಾಸದಿಂದ ಕೂಡಿದೆ. ಇದಕ್ಕೆ ಮೂಲಪ್ರೇರಣೆ ಮುಖ್ಯ ಶಿಕ್ಷಕರಾಗಿ ಕಾರ್ಯನಿರ್ವಹಿಸಿದ ಭೀಮಾರೆಡ್ಡಿ ಮತ್ತು ಶಿಕ್ಷಕ ವರ್ಗ. ಗ್ರಾಮದ ಶಾಲಾಭಿವೃದ್ಧಿ ಸಮಿತಿ ಹಾಗೂ ಗ್ರಾಮಸ್ಥರು ಶಾಲೆಯ ಅಭಿವೃದ್ಧಿಗೆ ಪ್ರೇರಕ ಶಕ್ತಿಯಾಗಿದ್ದಾರೆಂದರು.



ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ನಿರ್ಗಮನ ಮುಖ್ಯ ಶಿಕ್ಷಕ ಭೀಮಾರೆಡ್ಡಿ, ಬೇರೆ ಎಲ್ಲಾ ಇಲಾಖೆಗಿಂತ ಶಿಕ್ಷಣ ಇಲಾಖೆ ಪ್ರಮುಖವಾದದ್ದು. ವಿಶೇಷವಾಗಿ ಶಿಕ್ಷಕರು ನೀಡುವ ಶಿಕ್ಷಣವನ್ನು ಯಾವ ವಿದ್ಯಾರ್ಥಿಯೂ ಎಂದಿಗೂ ಮರೆಯಲಾರ. ನಮ್ಮಿಂದ ಕಲಿತ ವಿದ್ಯಾರ್ಥಿ ಯಾವುದೇ ಉನ್ನತ ಸ್ಥಾನದಲ್ಲಿದ್ದರೂ ನಮಗೆ ಗೌರವ ನೀಡುತ್ತಾನೆ. ಹೆಚ್ಚು ಗೌರವವನ್ನು ಸಂಪಾದಿಸುವವರು ಎಂದರೆ ಶಿಕ್ಷಕರು ಮಾತ್ರ. ಪ್ರತಿಯೊಬ್ಬ ವಿದ್ಯಾರ್ಥಿಯೂಶ್ರದ್ದೆಯಿಂದಕಲಿತರೆ ಮಾತ್ರ ವಿದ್ಯೆ ಒಲಿಯುತ್ತದೆ. ಕನ್ನಡ ನಾಡಿನಲ್ಲಿ ಕವಿಗಳು, ವಿದ್ವಾಂಸರು, ಲೇಖಕರನ್ನು ನೀಡಿದ ಕೀರ್ತಿ ಶಿಕ್ಷಣಕ್ಕಿದ್ದು ವಿಶೇಷವಾಗಿ ನಮ್ಮ ಗ್ರಾಮದ ಶಾಲೆಯಲ್ಲಿ ಕಲಿತವರು ಇಂದು ನಾಡಿನ ಹೆಮ್ಮೆಯ ಕವಿ, ಲೇಖಕರಾಗಿದ್ದಾರೆ ಎಂದರು.

ನಿವೃತ್ತ ಮುಖ್ಯಶಿಕ್ಷಕ ಸಿ ಶಿವನಾಗಪ್ಪ, ಶಿಕ್ಷಣ ಸಂಯೋಜಕ ಮಾರುತಿ ಭಂಡಾರಿ, ವಿಷ್ಣುವರ್ಧನ, ಶಿಕ್ಷಕರಾದ ಮಂಜುನಾಥ, ತಿಪ್ಪೇಸ್ವಾಮಿ, ಗೋವಿಂದಪ್ಪ, ಅರುಣ, ಶಿವಕುಮಾರ, ಭೂಷಣ್, ಗೋವಿಂದಪ್ಪ ಉಪಸ್ಥಿತರಿದ್ದರು.

## ಬಿಎಂ ಸರ್ಕಾರಿ ಪ್ರೌಢಶಾಲಾ ಹೊಸಕಟ್ಟದಲ್ಲಿ ಮತಗಟ್ಟೆ ಕೇಂದ್ರದಲ್ಲಿ ಮತಚಲಾವಣೆಗೆ ಅವಕಾಶ



**ಚಳ್ಳಕೆರೆ:** ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ವಿಧಾನಪರಿಷತ್‌ಗೆ ನಡೆಯುವ ಚುನಾವಣೆಯ ಮತದಾನ ಜೂನ್3ರ ಸೋಮವಾರ ನಡೆಯಲಿದ್ದು, ನಗರದ ಬಿಎಂ ಸರ್ಕಾರಿ ಪ್ರೌಢಶಾಲೆಯ ನೂತನ ಕಟ್ಟಡದಲ್ಲಿ ಮತಚಲಾಯಿಸಲು ಅವಕಾಶ ಮಾಡಿಕೊಡಲಾಗಿದೆ ಎಂದು ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದರು.

ಅವರು ಪತ್ರಿಕೆಯೊಂದಿಗೆ ಮಾತನಾಡಿ, ತಾಲ್ಲೂಕಿನಾದ್ಯಂತ ಒಟ್ಟು 1019 ಶಿಕ್ಷಕರು ಮತದಾನದ ಹಕ್ಕು ಪಡೆದಿದ್ದು ಆಪೈಕಿ ಪುರುಷ ಮತದಾರರು 754, ಮಹಿಳಾ ಮತದಾರರು 265 ಒಟ್ಟು 1019 ಮತದಾರರು ಮತದಾನ ಮಾಡುವ ಹಕ್ಕು ಪಡೆದಿದ್ದಾರೆ. ಅಂದು ಬೆಳಗ್ಗೆ 8 ಮಧ್ಯಾಹ್ನ 4ರ ತನಕ ಮತದಾನ ಮಾಡಲು ಅವಕಾಶ ಕಲ್ಪಿಸಿದೆ. ಮತದಾರರು ಮತಗಟ್ಟೆ ಕೇಂದ್ರಕ್ಕೆ ಆಗಮಿಸಿ ಮತಚಲಾಯಿಸುವಂತೆ ಅವರು ಮನವಿ ಮಾಡಿದ್ದಾರೆ.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T